ಸಂಪುಟ : 9 ಸಂಚಿಕೆ 118 ಪುಟ : 4 ಬೆಲೆ: 3.00 ಬುಧವಾರ ಜೂನ್ 12 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 118 Pages : 4 Price : 3.00 Wednesday June 12 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂನ್ 12ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ:** ವಾರ್ಡ್ ನಂ. 1ರಲ್ಲಿ ಎಸ್.ಎಮ್.ಕೃಷ್ಣಾ ನಗರ ಮೇಲಿನ ಭಾಗಗಳು, ವಾರ್ಡ್ ನಂ. 22ರಲ್ಲಿ ತಾಜನಗರ, ಸರ್ವೋದಯ, ಶರಣಪ್ಪನ ಲೈನ್, ರಾಚೋಟೇಶ್ವರ ನಗರ, 8 ನಂ. ಶಾಲೆ, ಗುಡಿಸಲು ಲೈನ್, ಸಿ.ಡಿ.ಓ. ಜೈನ್ ಶಾಲೆ, ಹಿಂದಿನ ಭಾಗ ಸಪ್ತಗಿರಿ ಲೈನ್, ಹಾಸ್ಟೆಲ್ ಲೈನ್, ವಾರ್ಡ್ ನಂ. 29ರಲ್ಲಿ ರಾಜೀವಗಾಂಧಿ ನಗರ, ಹೊಸ ಹುಡ್ಕೋ, ಉರ್ದು ಶಾಲೆ ಲೈನ್, ಗಾರ್ಡನ್ ಲೈನ್, ಪೊಲೀಸ್ ಸ್ಟೇಷನ್ ಲೈನ್, ಮಸೂತಿ ಲೈನ್, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 35ರಲ್ಲಿ ಇ.ಡಬ್ಲ್ಯೂ.ಎಸ್. ಭಾಗಗಳು, ವಾರ್ಡ್ ನಂ. 34ರಲ್ಲಿ ಬಸವೇಶ್ವರ ಶಾಲೆ ಲೈನ್, 3ನೇ ಕ್ರಾಸ್, 1ನೇ ಕ್ರಾಸ್, ಮಸೂತಿ ಲೈನ್, 2ನೇ ಕ್ರಾಸ್ ಗಣಪತಿಗುಡಿ ಸುತ್ತಮುತ್ತ, ಹನಮಂತದೇವರ ಗುಡಿ ಲೈನ್, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 31, 32ರಲ್ಲಿ ಚಿಕ್ಕಲಗಾರ ಓಣಿ, ಭಜಂತ್ರಿ ಓಣಿ, ರಂಗನವಾಡ, ಸುಣಗಾರ ಓಣಿ, ದುರಗಮ್ಮನ ಗುಡಿ ಲೈನ್, ದಾಸರ ಓಣಿ, ಹಳೇ ಕಚೇರಿ ರೋಡ್, ಜೋಡಮಾರುತಿ ಗುಡಿ ಲೈನ್, ಗುಜ್ಜರ ಬಸ್ತಿ ಲೈನ್, ಮುಳಗುಂದ ನಾಕಾ ಲೈನ್, ಯಲ್ಲಮ್ಮನಗುಡಿ ಲೈನ್, ಲಕ್ಷ್ಮೀಗುಡಿ ಲೈನ್, ತ್ರಿಕೂಟೇಶ್ವರ ರಸ್ತೆ, ಏಳುಮಕ್ಕಳ ತಾಯಿಗುಡಿ ಲೈನ್, ಇನ್ನೂ ಉಳಿದ ಕೆಲವು ಭಾಗಗಳು, ವಾರ್ಡ್ ನಂ. 12, 13 ರಲ್ಲಿ ವಸ್ತ್ರದ ಅವರ ಲೈನ್, ಗಣೇಶ ಲೈನ್, ಡಂಬಳ ಲೈನ್, ಆನಂದ ಕಾರ್ಕಳ ಲೈನ್, ಗಣಪತಿ ಗುಡಿ ಹಿಂದಿನ ಲೈನ್, ಗೋಟೂರ ಲೈನ್, ಇಟಗಿ ಲೈನ್, ಈದ್ಗಾ ಕಾಂಪ್ಲೆಕ್ಸ್ , ಕಿರೇಸೂರ ಲೈನ್, ಟೋಪಿಯವರ ಲೈನ್, 3ನೇ ಕ್ರಾಸ್, ಅಂಗಡಿಯವರ ಲೈನ್, ವಾರ್ಡ್ ನಂ. 16ರಲ್ಲಿ ರಹಮತ್ ನಗರದ ಭಾಗಗಳು-4 ಗುಡದೂರ ಸ್ವಾಮಿಮಠ, ಅಬ್ಬಿಗೇರಿ ಲೈನ್, ಹೊಸ ಗಂಗಿಮಡಿ ಲೈನ್, ರಾಯಲ್ ಸ್ಕೂಲ್ ಲೈನ್, ಉಳಿದ ಕೆಲವು ಭಾಗಗಳು

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಿಳೆಯರಿಗಾಗಿ ಉಚಿತ ಯೋಗ ಜಿಮ್ ತರಬೇತಿ

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ, ಗದಗ ಜಿಲ್ಲಾ ಯೋಗ ಒಕ್ಕೂಟ ಹಾಗೂ ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆ ಇವರುಗಳ ಸಹಯೋಗದಲ್ಲಿ ಮುಂಬರುವ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಯೋಗೋತ್ಸವ-24 ಕಾರ್ಯಕ್ರಮದ ನಿಮಿತ್ತ ಮಹಿಳೆಯರಿಗಾಗಿ ಉಚಿತ ಯೋಗ ಜಿಮ್ ತರಬೇತಿ ಶಿಬಿರ ಆಯೋಜಿಸಲಾಗಿದೆ.

ಶಿಬಿರವು ಜೂನ್ 12ರಿಂದ ಒಂದು ವಾರ ಕಾಲ ಪ್ರತಿದಿನ ಸಾಯಂಕಾಲ 5.30ರಿಂದ 6.30ರವರೆಗೆ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ (ಬಸವೇಶ್ವರ ಹೈಸ್ಕೂಲ್ ಆವರಣ) ಗದಗದಲ್ಲಿ ಮಹಿಳೆಯರಿಗಾಗಿ ನಡೆಯುವುದು.

ಶಿಬಿರದಲ್ಲಿ ಮಹಿಳೆಯರ ಆರೋಗ್ಯ ಭಾಗ್ಯಕ್ಕಾಗಿ ಯೋಗಾಭ್ಯಾಸವನ್ನು ಯೋಗ ಸಲಕರಣೆ, ಸಾಮಗ್ರಿಗಳ ಮೂಲಕ ಸರಳ ತರಬೇತಿ ಜೊತೆಗೆ ಮಹಿಳೆಯರ ಸಾಮಾನ್ಯ ಕಾಯಿಲೆಗಳಿಗೆ ಯೋಗ ಚಿಕಿತ್ಸೆಯ ಸಲಹೆ-ಸೂಚನೆಗಳನ್ನು ನೀಡಲಾಗುವುದು. ಯೋಗ ಶಿಕ್ಷಕಿ ಸುನಂದಾ ಜ್ಯಾನೋಪಂತರ ಮತ್ತು ವೀಣಾ ಮಾಲಿಪಾಟೀಲ ತರಬೇತಿ ನೀಡುವರು.

ಆಸಕ್ತ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಸಂಘಟಿಕರ ಪರವಾಗಿ ಶಿಬಿರ ಮಾರ್ಗದರ್ಶಕರಾದ ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ವಿನಂತಿಸಿದ್ದಾರೆ.

## ಗಂಗಣ್ಣ ಕೋಟಿ ಅಗಲುವಿಕೆಗೆ ಶ್ರೀ ಮಹೇಶ್ವರ ಸ್ವಾಮೀಜಿ ಸಂತಾಪ

■ವಿಜಯಸಾಕ್ಷಿ ಸುದ್ದಿ, ಗದಗ



ಸಾಮಾಜಿಕ, ಧಾರ್ಮಿಕ ಕ್ಷೇತ್ರದಲ್ಲಿ ಗದುಗಿನ ಗಂಗಣ್ಣ ಕೋಟಿ ಅವರು ಚಿರಸ್ಥಾಯಿಯಾಗಿದ್ದಾರೆ. ಅವರ ಅಗಲುವಿಕೆ ನಿಜಕ್ಕೂ ತುಂಬಿಬಾರದ ಹಾನಿಯಾಗಿದೆ ಎಂದು ಗದುಗಿನ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ಸಂತಾಪ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪ್ರತಿಷ್ಠಿತ ಕೋಟಿ ಅವರ ಮನೆತನದಲ್ಲಿ ಜನಿಸಿದ ಗಂಗಣ್ಣ ಅವರು ನಿವೃತ್ತಿಯ ಬಳಿಕ ಸಮಾಜಮುಖಿಯಾಗಿ ಕಾರ್ಯ ಮಾಡಿದವರು. ಸಹಕಾರಿ ಬ್ಯಾಂಕ್ ತೆರೆಯುವ ಮೂಲಕ ಸಣ್ಣಪುಟ್ಟ ವ್ಯಾಪಾರಸ್ಥರಿಗೆ ಉತ್ತೇಜನ ನೀಡಿ ಅವರನ್ನು ಸ್ವಾವಲಂಬಿಗಳನ್ನಾಗಿ ಮಾಡಿದವರು. ಅಜಾತ ಶತ್ರು, ಸಹಾಯ ಬಯಸಿ ಬಂದವರಿಗೆ ಬರಿ ಕೈಯಿಂದ ಕಳುಹಿಸಿದವರಲ್ಲ.

ಅಡವೀಂದ್ರಸ್ವಾಮಿ ಮಠದ ಅನ್ನಪೂರ್ಣೇಶ್ವರಿ ಜಾತ್ರಾ ಮಹೋತ್ಸವಕ್ಕೆ ವಿಶೇಷ ಒತ್ತು ನೀಡಿದವರು. ಉದಾರ ದೇಣಿಗೆ ನೀಡಿದ್ದಲ್ಲದೆ ಎರಡು ಅವಧಿಯ ಜಾತ್ರಾ ಸಮಿತಿಯ ಅಧ್ಯಕ್ಷರಾಗಿದ್ದಾಗ ಭಕ್ತಾದಿಗಳ ಮೂಲಕ ಬಹು ದೊಡ್ಡ ಮೊತ್ತದ ದೇಣಿಗೆಯನ್ನು ಸಂಗ್ರಹಿಸಲು ಮುಂಚೂಣಿಯಲ್ಲಿದ್ದು ಕಾರ್ಯ ನಿರ್ವಹಿಸಿದವರು.

ರಾಷ್ಟ್ರೀಯ ಸ್ವಯಂ ಸಂಸ್ಥೆಯ ಅರುಣೋದಯ ಶಾಲೆ ಸ್ಥಾಪನೆಯಾಗಲು ಇವರ ಕೊಡುಗೆ ದೊಡ್ಡದು. ಓರ್ವ ಬಡ ವಿದ್ಯಾರ್ಥಿಯ ಸಂಪೂರ್ಣ ಖರ್ಚು ವಹಿಸಿಕೊಂಡವರು. ಅನ್ನಪೂರ್ಣೇಶ್ವರಿ ಮಠ, ಗದುಗಿನ ತೋಂಟದಾರ್ಯ ಮಠ, ಶಿರಹಟ್ಟಿಯ ಶ್ರೀ ಫಕೀರೇಶ್ವರ ಮಠ, ಕುರಡಗಿಯ ವರವೀರಭದ್ರೇಶ್ವರ ಮಠ ಹೀಗೆ ಹಲವಾರು ಸಂಸ್ಥೆಗಳೊಂದಿಗೆ ಅವಿನಾಭಾವ ಸಂಬಂದ ಹೊಂದಿದ್ದರು.

ಗಂಗಣ್ಣ ಕೋಟಿ ಅವರ ಅಗಲುವಿಕೆಯಿಂದ ಸಮಾಜಕ್ಕೆ ತುಂಬಾ ನಷ್ಟವಾಗಿದೆ. ಅವರ ಆತ್ಮಕ್ಕೆ ತಾಯಿ ಅನ್ನಪೂರ್ಣೇಶ್ವರಿ ಚಿರಶಾಂತಿ, ಸದ್ಗತಿ ನೀಡಲೆಂದು ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ಪ್ರಾರ್ಥಿಸಿದ್ದಾರೆ.

### 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಜಾಥಾದಲ್ಲಿ ನ್ಯಾ.ಮೂ ಸಿ.ಎಸ್. ಶಿವನಗೌಡ್ರ

# ಬಾಲಕಾರ್ಮಿಕ ಪದ್ಧತಿ ಹೊಡೆದೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಪ್ರತಿಯೊಬ್ಬರೂ ಕ್ರಿಯಾಶೀಲತೆಯಿಂದ ಶ್ರಮವಹಿಸಿ ಎಂದು ಹಿರಿಯ ದಿವಾಣಿ ನ್ಯಾಯಾಧೀಶರಾದ ಸಿ.ಎಸ್. ಶಿವನಗೌಡ್ರ ಕರೆ ನೀಡಿದರು.

ನಗರದ ತೋಂಟದಾರ್ಯ ಪ್ರೌಢಶಾಲೆಯಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಇವುಗಳ ಸಹಯೋಗದಲ್ಲಿ ವಿಶ್ವ ಬಾಲಕಾರ್ಮಿಕರ ಪದ್ಧತಿ ವಿರೋಧಿ ದಿನಾಚರಣೆಯ ಜಾಗೃತಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.

ಬಾಲಕಾರ್ಮಿಕ ಪದ್ಧತಿ ಒಂದು ಸಾಮಾಜಿಕ ಪಿಡುಗಾಗಿದ್ದು, ಬಾಲಕಾರ್ಮಿಕ ಪದ್ಧತಿಯ ನಿರ್ಮೂಲನೆಗೆ ಸಾರ್ವಜನಿಕರು ಮತ್ತು ವಿವಿಧ ಸಂಘ-ಸಂಸ್ಥೆಗಳು ಸಹಕರಿಸಿ ಬಲವಂತವಾಗಿ ಕೆಲಸ ಮಾಡುತ್ತಿರುವ ಮಕ್ಕಳ ಮಾನಸಿಕ ಮತ್ತು ದೈಹಿಕ ಆರೋಗ್ಯವನ್ನು ಕಾಪಾಡಬೇಕು ಎಂದು ಅವರು ಹೇಳಿದರು.

ಜಾಥಾದಲ್ಲಿ ಕೆಲಸ ಬಿಡಿಸಿ ಶಾಲೆಗೆ ಕಳಿಸಿ, ಬೆಳೆಯುವ ವಯಸ್ಸಿನಲ್ಲೇ ದುಡಿಮೆಗೆ



ದೂಡಬೇಡಿ, ಮಕ್ಕಳನ್ನು ಶಾಲೆಗೆ ಕಳಿಸಿ-ಕೆಲಸಕ್ಕಲ್ಲ, ದುಡಿಮೆ ಬೇಡ ಶಿಕ್ಷಣ ಬೇಕು, ಮಕ್ಕಳನ್ನು ದುಡಿಸಿಕೊಳ್ಳುವುದು ಕಾನೂನು ಬಾಹಿರ, ಬನ್ನಿ ಬಾಲಕಾರ್ಮಿಕ ಪದ್ಧತಿಯನ್ನು ತಡೆಯೋಣ ಸತ್ಪ್ರಜೆಗಳನ್ನಾಗಿಸಲು ಹುರಿದುಂಬಿಸೋಣ, ಮಕ್ಕಳಿಗೆ ಬೇಕು ಆಟ ಪಾಠ-ಬೇಡ ಕೆಲಸಗಳ ಕಾಟ, ಬಾಲಕಾರ್ಮಿಕ ಪದ್ಧತಿ ನಿವಾರಣೆ ದೇಶದ ಸುಧಾರಣೆ, ದುಡಿಮೆಯಿಂದ ಶಾಲೆಗೆ ಕತ್ತಲೆಯಿಂದ ಬೆಳಕಿಗೆ, ಹಚ್ಚಬೇಡ ಹಚ್ಚಬೇಡ ಕೂಲಿಗೆ ನನ್ನನ್ನು-ಹಚ್ಚು ಬಾ ಹಚ್ಚು ಬಾ ಶಾಲೆಗೆ ನನ್ನನ್ನು, ದುಡಿಮೆ ಬೇಡ ಶಿಕ್ಷಣ ಬೇಕು ಎಂಬಿತ್ಯಾದಿ ಘೋಷವಾಕ್ಯಗಳೊಂದಿಗೆ ತೋಂಟ-ದಾರ್ಯ ಪ್ರೌಢಶಾಲೆಯಿಂದ ಪ್ರಾರಂಭವಾದ ಜಾಥಾ ರೋಟರಿ ವೃತ್ತ, ಗಾಂಧಿ ವೃತ್ತ, ಟಾಂಗಾ ವೃತ್ತ ಸೇರಿದಂತೆ ನಗರದ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಲಾಯಿತು.

ಜಾಥಾದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿಲ್ಲಾ ಕಾರ್ಮಿಕ ಇಲಾಖೆಯ ಅಧಿಕಾರಿ ಮೊಹಮ್ಮದ್ ಅಕ್ರಂ ಎಚ್. ಅಲ್ಲಾಪೂರ, ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ, ಮಕ್ಕಳ

> ಹೆಚ್ಚುವರಿ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ಮಾತನಾಡಿ, ಸಮಾಜದ ಅನಿಷ್ಟ ಪದ್ಧತಿಯಾದ ಬಾಲಕಾರ್ಮಿಕತೆಯನ್ನು ಕೊನೆಗೊಳಿಸಿ ದೇಶದ ಆಸ್ತಿಯಾದ ಮಕ್ಕಳ ಜೀವನವನ್ನು ಉಜ್ವಲಗೊಳಿಸುವ ಜವಾಬ್ದಾರಿ ನಮ್ಮೆಲ್ಲರದಾಗಿದೆ ಎಂದು ಹೇಳಿದರು.

ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಅನ್ನಪೂರ್ಣ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಮ್.ಎ. ರಡ್ಡೇರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಕಾರ್ಮಿಕ ನಿರೀಕ್ಷಕ ಗಿರೀಶ ಬಂಕದಮನಿ, ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ ಯೋಜಾನಾ ನಿರ್ದೇಶಕ ಸಂದೇಶ ಪಾಟೀಲ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.



### ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು


# ಯೋಗವು ಜೀವನ ಪದ್ಧತಿ ಆಗಬೇಕು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ನಿತ್ಯ ಮಾಡುವ ಯೋಗ ಅನೇಕ ರೋಗಗಳ ಪರಿಹಾರಕ್ಕೆ ಉತ್ತಮ ಮಾರ್ಗವಾಗಿದೆ. ಯೋಗವನ್ನು ಜೀವನ ಪದ್ಧತಿಯಾಗಿ ಅಳವಡಿಸಿಕೊಳ್ಳುವದರಿಂದ ಸದೃಡ ದೇಹ ಮತ್ತು ಆರೋಗ್ಯವಂತ ಮನಸ್ಸು ಹೊಂದಲು ಸಾಧ್ಯವಾಗುತ್ತದೆ. ಆಯುಷ್ ಇಲಾಖೆ ಯೋಗದ ಜನಪ್ರಿಯತೆಗೆ ಆದ್ಯತೆ ನೀಡಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಮಂಗಳವಾರ ಮಧ್ಯಾಹ್ನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಸಿದ್ಧತಾ ಸಭೆ ಜರುಗಿಸಿ ಮಾತನಾಡಿದರು.

ಆಯುಷ್ ಇಲಾಖೆ ಮೂಲಕ ಈ ಕಾರ್ಯಕ್ರಮ ಸಂಘಟಿಸಲಾಗುತ್ತದೆ. ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು, ಕೇಂದ್ರ ಸಚಿವರು, ಸಭಾಪತಿಗಳು ಸೇರಿದಂತೆ



ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗುತ್ತದೆ. ಯೋಗ ದಿನಾಚರಣೆಯಲ್ಲಿ ಭಾಗವಹಿಸುವ ಯೋಗಪಟುಗಳಿಗೆ, ಸಾರ್ವಜನಿಕರಿಗೆ ಕೆಎಂಎಫ್‌ನಿಂದ ಹಾಲು ವಿತರಿಸಲಾಗುತ್ತದೆ. ಕಾರ್ಯಕ್ರಮದ ಯಶಸ್ವಿ ಸಂಘಟಣೆಗೆ ವಿವಿಧ ಇಲಾಖೆಗಳಿಗೆ ಕಾರ್ಯ ಹಂಚಿಕೆ ಮಾಡಲಾಗಿದ್ದು, ಪ್ರತಿ ಇಲಾಖೆ ಅಧಿಕಾರಿಗಳು ಉತ್ತಮವಾಗಿ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಆಯುಷ್ ಇಲಾಖೆಯ ಜಿಲ್ಲಾ ಅಧಿಕಾರಿ ಡಾ.ಗಣೇಶ ಕಬಾಡೆ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯಧಿಕಾರಿ ಡಾ. ಶಶಿ ಪಾಟೀಲ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್. ಎಸ್. ಕೆಳದಿಮಠ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ ಕೆ.ಪಿ. ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಆಯುಷ್ ವೈದ್ಯರು, ಆಯುರ್ವೇದ ಮಹಾವಿದ್ಯಾಲಯ ಪ್ರತಿನಿಧಿಗಳು, ಯೋಗ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

> ಪ್ರತಿ ವರ್ಷದಂತೆ ಅಂತಾರಾಷ್ಟ್ರೀಯ ಯೋಗ ದಿನವನ್ನು ಜೂನ್ 21ರಂದು ನಗರದ ಆರ್.ಎನ್. ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಅರ್ಥಪೂರ್ಣವಾಗಿ ಆಯೋಜಿಸಲಾಗುತ್ತದೆ. ಅಂದು ಬೆಳಿಗ್ಗೆ 6.45ಕ್ಕೆ ಉದ್ಘಾಟನೆ, ಬೆಳಿಗ್ಗೆ 7ರಿಂದ 8 ಗಂಟೆವರೆಗೆ ಯೋಗ ಪ್ರದರ್ಶನ ಇರುತ್ತದೆ. ಇದರಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ವಿವಿಧ ಸರಕಾರಿ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು, ವಿವಿಧ ಯೋಗ ಹಾಗೂ ಇತರ ಸಂಘ-ಸಂಸ್ಥೆಗಳ ಸದಸ್ಯರು, ಸಾರ್ವಜನಿಕರು ಭಾಗವಹಿಸಲಿದ್ದಾರೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

## ವೈದ್ಯಾಧಿಕಾರಿ ನೇಮಕಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲೆಯ ಅಧೀನ ಆರೋಗ್ಯ ಸಂಸ್ಥೆಗಳಲ್ಲಿ ಖಾಲಿ ಇರುವ 2 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹಾಗೂ 11 ತಜ್ಞ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಬೇಕಾಗಿದ್ದು, ಆಸಕ್ತ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನೇಮಕಾತಿಯನ್ನು ನೇರ ಸಂದರ್ಶನ ಮುಖಾಂತರ ರೋಸ್ಟರ್ ಕಂ ಮೆರಿಟ್ ಆಧಾರದ ಮೇಲೆ ಭರ್ತಿ ಮಾಡಲಾಗುವದು. ಎಂಬಿಬಿಎಸ್ ವಿದ್ಯಾರ್ಹತೆ ಅಥವಾ ಸ್ನಾತಕೋತ್ತರ ಪದವಿ ಪ್ರಮಾಣಪತ್ರ ಹೊಂದಿದ ಆಸಕ್ತ ಅಭ್ಯರ್ಥಿಗಳು ಜೂನ್ 18ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಗವರೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಕೆ.ಸಿ. ಪಾರ್ಕ್ ಹತ್ತಿರ-ಧಾರವಾಡ ಇಲ್ಲಿ ಖುದ್ದಾಗಿ ನೇರ ಸಂದರ್ಶನಕ್ಕೆ ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲ ಮೂಲ ದಾಖಲಾತಿಯೊಂದಿಗೆ ಹಾಜರಾಗಿ ಅರ್ಜಿಯನ್ನು ನೇರವಾಗಿ ಸಲ್ಲಿಸಬಹುದಾಗಿದೆ. ಅರ್ಜಿಯೊಂದಿಗೆ ಎಲ್ಲ ದಾಖಲಾತಿಗಳ ನಕಲು ಪ್ರತಿಯನ್ನು ಸಲ್ಲಿಸುವದು ಕಡ್ಡಾಯವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶಶಿ ಪಾಟೀಲ ತಿಳಿಸಿದ್ದಾರೆ.

ಖಾಲಿ ಇರುವ ವೈದ್ಯ ಹುದ್ದೆಗಳ ವಿವರ: ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ (2) ಹುದ್ದೆಗಳು, ಶಸ್ತ್ರ ಚಿಕಿತ್ಸಾ ತಜ್ಞವೈದ್ಯರ (ಜನರಲ್ ಸರ್ಜನ್) (2) ಹುದ್ದೆಗಳು, ಸ್ತ್ರೀ ರೋಗ ತಜ್ಞವೈದ್ಯರ (ಗೈನಿಕಾಲೋಜಿಸ್ಟ) (2) ಹುದ್ದೆಗಳು, ಅರವಳಿಕೆ ತಜ್ಞವೈದ್ಯರ (ಅನಸ್ತೇಶಿಯಾ) (1) ಹುದ್ದೆ, ಚಿಕ್ಕ ಮಕ್ಕಳ ತಜ್ಞವೈದ್ಯರ (ಪಿಡಿಯಾಟ್ರಿಕ್) (1) ಹುದ್ದೆ, ಕ್ಷ-ಕಿರಣ ತಜ್ಞವೈದ್ಯರ (ರೇಡಿಯೋಲಾಜಿಸ್ಟ) (3) ಹುದ್ದೆಗಳು, ನೇತ್ರ ತಜ್ಞವೈದ್ಯರ (ಆಪ್ತಾಲೋಮೊಜಿಸ್ಟ) (1) ಹುದ್ದೆ, ಎಲುಬು-ಕೀಲು ತಜ್ಞವೈದ್ಯರ (ಅರ್ಥೋಪಿಡಿಕ ಸರ್ಜನ) (1) ಹುದ್ದೆ.

## 'ಯೋಗೋತ್ಸವ' ಕಾರ್ಯಕ್ರಮಕ್ಕೆ ಡಾ. ಉಪ್ಪಿನ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಯೋಗೋತ್ಸವ-2024 ಕಾರ್ಯಕ್ರಮದ ಮೂಲಕ ಯೋಗದ ಪರಿಚಯ ಮತ್ತು ಮಹತ್ವದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಸರ್ಕಾರ ಹಮ್ಮಿಕೊಂಡಿದ್ದು, ಇದರ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಿ. ಗದಗ ಜಿಲ್ಲೆಯ ಶಾಲಾ-ಕಾಲೇಜುಗಳು, ಗದಗ-ಬೆಟಗೇರಿ ನಗರಸಭೆಯವರು ಸೇರಿದಂತೆ ಸರ್ಕಾರದ ಎಲ್ಲಾ ಇಲಾಖೆಗಳು ಆಸಕ್ತಿಯಿಂದ ಭಾಗವಹಿಸಿ ಅಂತಾರಾರಾಷ್ಟ್ರೀಯ ಯೋಗತ್ಸವ - 2024 ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಮಲ್ಲಿಕಾರ್ಜುನ ಉಪ್ಪಿನ



ಮನವಿ ಮಾಡಿದರು.

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ ಗದಗ, ಜಿಲ್ಲಾ ಆಯುಷ್ ಇಲಾಖೆ ಗದಗ, ಸಾರ್ವಜನಿಕ ಶಿಕ್ಷಣ ಇಲಾಖೆ ಗದಗ, ಸಮಾಜ ಕಲ್ಯಾಣ ಇಲಾಖೆ, ಯುವಜನ ಸಬಲೀಕರಣ ಕ್ರೀಡಾ ಇಲಾಖೆ, ವಸತಿ ಶಿಕ್ಷಣ ಇಲಾಖೆ ಹಾಗೂ ಸ್ಕೌಟ್ಸ್-ಗೈಡ್ಸ್, ಯೋಗ ಸಂಘ-ಸಂಸ್ಥೆಗಳ ಸಂಯೋಗದೊಂದಿಗೆ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ನಿಮಿತ್ತ ಜೂನ್ 21ರವರೆಗೆ ಹಮ್ಮಿಕೊಂಡಿರುವ ಯೋಗೋತ್ಸವ-2024ರ ಕಾರ್ಯಕ್ರಮಕ್ಕೆ ನಗರದ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದಲ್ಲಿ ಸಾಂಕೇತವಾಗಿ ಚಾಲನೆ ನೀಡಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯ ಮೇಲ್ವಿಚಾರಕ ಡಾ. ಸಂಜೀವ ನಾರಪ್ಪನವರ, ಡಾ. ಅಶೋಕ ಮತ್ತಿಕಟ್ಟಿ, ಡಾ. ಕಮಲಾಕರ ಸೇರಿದಂತೆ ಇಲಾಖೆಯ ಸಿಬ್ಬಂದಿಗಳು ಹಾಗೂ ವಸತಿ ನಿಲಯದ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

## ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಚೇತನ ಕ್ಯಾಂಟೀನ್‌ನಿಂದ ರೇಲ್ವೆ ಸ್ಟೇಷನ್‌ವರೆಗೆ ಹಾಗೂ ಶ್ರೀ ವರಸಿದ್ಧಿವಿನಾಯಕ ದೇವಸ್ಥಾನದಿಂದ ಹಾತಲಗೇರಿ ನಾಕಾವರೆಗಿನ ರಸ್ತೆಗಳು ಗುಂಡಿಗಳಿಂದ ಕೂಡಿದೆ. ಈ ಭಾಗದ ರಸ್ತೆಯಲ್ಲಿ ಫೆವರ್ಸ್ ಜೋಡಣೆ ಮಾಡಿ ರಸ್ತೆ ಸಂಚಾರವನ್ನು ಸುಗಮಗೊಳಿಸಿ ಮಕ್ಕಳ, ವೃದ್ಧರ, ರೋಗಿಗಳ ತೊಂದರೆಯನ್ನು ನಿವಾರಿಸಬೇಕೆಂದು ಸಾರ್ವಜನಿಕರು ಮನವಿ ಮಾಡಿಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಮುಖಂಡರಾದ ಶಿವರಾಜ ಗುಂಡಕಲ್ಲ, ನಾಗರಾಜ ಕರಿಬಿಷ್ಠಿ, ಸುರೇಶ ಗೌಡರ, ಪ್ರಭು ಗುಂಡಕಲ್ಲ, ಮಾರುತಿ ಆದೋನಿ, ಬಸವರಾಜ ಆದೋನಿ, ಕಿರಣ ದೊಡ್ಡಮನಿ ಸೇರಿದಂತೆ 12ನೇ ವಾರ್ಡಿನ ಸಾರ್ವಜನಿಕರು ಉಪಸ್ಥಿತರಿದ್ದರು.

## ಸಂಪಾದಕೀಯ

# ಮೈತ್ರಿ ಮುನಿಸು ಆರಂಭ

ನರೇಂದ್ರ ಮೋದಿ ನೇತೃತ್ವದ ಎನ್ ಡಿ ಎ ಸರ್ಕಾರ ಬಹುತೇಕ ಪೂರ್ಣ ಪ್ರಮಾಣದಲ್ಲಿ ರಚನೆಯಾಗಿದೆ. 70 ಜನ ಸಚಿವರಿಗೆ ಖಾತೆಗಳನ್ನು ಹಂಚಿಕೆ ಮಾಡಲಾಗಿದೆ. ಕೆಲವರಿಗೆ ಸಂಪುಟ ದರ್ಜೆ ಮತ್ತು ಇನ್ನು ಕೆಲವರಿಗೆ ರಾಜ್ಯ ಖಾತೆ ನೀಡಿದ್ದಾರೆ. ನೂತನ ಸಚಿವರ ಪೈಕಿ ಕೆಲವರು ಅದಾಗಲೇ ತಮ್ಮ ಕರ್ತವ್ಯವನ್ನು ಆರಂಭಿಸಿದ್ದಾರೆ.

ಹೊಸ ಸರ್ಕಾರ ಎಂದ ಮೇಲೆ ಸಣ್ಣ ಪುಟ್ಟ ಭಿನ್ನಾಭಿಪ್ರಾಯಗಳು ಮೂಡುವುದು ಸಹಜ. ಆದರೆ ಆರಂಭದಲ್ಲಿ ಭಿನ್ನಾಭಿಪ್ರಾಯ ಮೂಡಿದರೆ ಭವಿಷ್ಯದ ದಿನಗಳು ಸುಗಮವಾಗಿ ಇರಲು ಸಾಧ್ಯವಿಲ್ಲ. ಸದ್ಯ ಒಂದು ಸಣ್ಣ ಬಿರುಕು ಎನ್‌ಡಿಎ ಮೈತ್ರಿಕೂಟದಲ್ಲಿ ಶುರುವಾಗುತ್ತಿದೆ.

ಮಹಾರಾಷ್ಟ್ರದ ಶಿಂಧೆ ಬಣದ ಶಿವಸೇನೆ ಖಾತೆ ಹಂಚಿಕೆ ತಗಾದೆ ತೆಗೆದಿದೆ. ಶಿವಸೇನೆಗಿಂತ ಕಡಿಮೆ ಸ್ಥಾನಗಳನ್ನ ಗೆದ್ದ ಪಕ್ಷದ ಮುಖಂಡರಿಗೆ ಸಂಪುಟ ದರ್ಜೆ ಸ್ಥಾನಮಾನ ನೀಡಲಾಗಿದೆ. ಅದೇ ಶಿವಸೇನೆ ಸಂಸದರಿಗೆ ರಾಜ್ಯ ಖಾತೆ ನೀಡಿರುವುದಕ್ಕೆ ಶಿವಸೇನೆ ಸಂಸದ ಶ್ರೀರಂಗ ಬಹಿರಂಗವಾಗಿ ತಮ್ಮ ಅಸಮಾಧಾನ ಹೊರಹಾಕಿದ್ದಾರೆ.

ಅಷ್ಟಕ್ಕೂ ಶ್ರೀರಂಗ ಉಲ್ಲೇಖಿಸಿರುವುದು ಕರ್ನಾಟಕದ ಎಚ್ ಡಿ ಕುಮಾರಸ್ವಾಮಿ ವಿಚಾರವಾಗಿ. ಕೇವಲ ಎರಡು ಸೀಟು ಗೆದ್ದ ಪಕ್ಷಕ್ಕೆ ಸಂಪುಟ ಸ್ಥಾನಮಾನ. ಎಂಟು ಸೀಟು ಗೆದ್ದ ಪಕ್ಷಕ್ಕೆ ಆ ಭಾಗ್ಯ ಇಲ್ಲದಿರುವುದು ಅಸಮಾಧಾನಕ್ಕೆ ಕಾರಣವಾಗಿದೆ.

ಇದು ಕೇವಲ ಮಹಾರಾಷ್ಟ್ರದ ಶಿವ ಸೇನೆ ಪಕ್ಷದ ಅಸಮಾಧಾನ ಮಾತ್ರವಲ್ಲ, ಇಂಡಿಯಾ ಮೈತ್ರಿಕೂಟದ ಇನ್ನಿತರ ಮಿತ್ರ ಪಕ್ಷಗಳಲ್ಲೂ ನಿಧಾನಕ್ಕೆ ಕಂಡುಬರುತ್ತಿದೆ. ಜೊತೆಗೆ ಮಿತ್ರ ಪಕ್ಷಗಳಿಗೆ ಮೀತಿಮೀರಿ ಆದ್ಯತೆ ನೀಡುತ್ತಿರುವ ಬಿಜೆಪಿ ವರಿಷ್ಠರ ಬಗ್ಗೆ ಕೆಲ ಮುಖಂಡರೂ ಒಳಗೊಳಗೆ ಕುದಿಯುತ್ತಿದ್ದಾರೆ.

ಮೈತ್ರಿ ಸರ್ಕಾರದಲ್ಲಿ ಇಂತಹ ಅಸಮಾಧಾನಗಳು ಮೂಡುವುದು ಸಹಜ. ಆದರೆ ಆರಂಭದಲ್ಲಿ ಎಚ್ಚರಿಕೆ ಹೆಜ್ಜೆಗಳನ್ನ ಇಡದಿದ್ದರೆ, ಅಟಲ್ ಬಿಹಾರಿ ವಾಜಪೇಯಿ ಸರ್ಕಾರದ ಗತಿ ಮೋದಿ ಸರ್ಕಾರಕ್ಕೂ ಬರುವ ಸಾಧ್ಯತೆಗಳಿವೆ. ಮೈತ್ರಿ ಧರ್ಮ ಪಾಲನೆ ಪರಿಪೂರ್ಣ ಮತ್ತು ಸಮಾಧಾನಕರವಾಗಿದ್ದರೆ ಮಾತ್ರ ಸರ್ಕಾರ ಸುಸೂತ್ರವಾಗಿಯೇ ನಡೆಯಲು ಸಾಧ್ಯ.

# ರೈತ ಬಾಂಧವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನ ಮುಂಗಾರು ಹಂಗಾಮಿಗೆ ಗದಗ ಜಿಲ್ಲೆಗೆ ಅವಶ್ಯವಿರುವ ವಿವಿಧ ಬೆಳೆಗಳ ಬಿತ್ತನೆ ಬೀಜಗಳ ಹಾಗೂ ರಸಗೊಬ್ಬರದ ಪ್ರಮಾಣವನ್ನು ದಾಸ್ತಾನು ಮಾಡಲಾಗಿದ್ದು, ಬಿತ್ತನೆ ಬೀಜದ ಹಾಗೂ ರಸಗೊಬ್ಬರದ ಅಭಾವ ಇರುವುದಿಲ್ಲ.

ಬೇಡಿಕೆಯನ್ವಯ 7918 ಕ್ವಿಂಟಲ್ ವಿವಿಧ ಬೆಳೆಗಳ ಬಿತ್ತನೆ ಬೀಜಗಳಿಗೆ ಬೇಡಿಕೆ ಸಲ್ಲಿಸಲಾಗಿದೆ. ಈವರೆಗೆ 5150 ಕ್ವಿಂಟಲ್ ಪೂರೈಕೆಯಾಗಿರುತ್ತದೆ. ಇಲ್ಲಿಯವರೆಗೆ 3013 ಕ್ವಿಂಟಲ್ ವಿವಿಧ ಬೆಳೆಗಳ ಬಿತ್ತನೆ ಬೀಜಗಳನ್ನು ರೈತ ಸಂಪರ್ಕ ಕೇಂದ್ರ ಹಾಗೂ ಹೆಚ್ಚುವರಿ ಬೀಜ ವಿತರಣಾ ಕೇಂದ್ರಗಳ ಮೂಲಕ ವಿತರಣೆಯಾಗಿದ್ದು, ಇನ್ನೂ 2137 ಕ್ವಿಂಟಲ್ ಬೀಜದ ದಾಸ್ತಾನು ಇರುತ್ತದೆ ಹಾಗೂ ಬೀಜ ವಿತರಣೆ ಪ್ರಗತಿಯಲ್ಲಿರುತ್ತದೆ. ಇದಲ್ಲದೇ ಜಿಲ್ಲೆಯ ಖಾಸಗಿ ಮಾರಾಟಗಾರರ ಹತ್ತಿರ ಎಲ್ಲಾ ಬೆಳೆಗಳ ಬಿತ್ತನೆ ಬೀಜಗಳು ಲಭ್ಯವಿರುತ್ತವೆ. ಯಾವುದೇ ಬೆಳೆಯ ಬಿತ್ತನೆ ಬೀಜಗಳ ಅಭಾವ ಇರುವುದಿಲ್ಲ.

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಒಟ್ಟು 24410 ಮೆಟ್ರಿಕ್ ಟನ್ ರಸಗೊಬ್ಬರ ಮಾರಾಟವಾಗಿರುತ್ತದೆ. ಪ್ರಸ್ತುತ 15455 ಮೆಟ್ರಿಕ್ ಟನ್ ವಿವಿಧ ಶ್ರೇಣಿಯ ರಸಗೊಬ್ಬರದ ದಾಸ್ತಾನು ಇರುತ್ತದೆ ಹಾಗೂ ರಸಗೊಬ್ಬರದ ಅಭಾವ ಇರುವುದಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬೆಟಗೇರಿಯ ಮಂಜುನಾಥ ನಗರದಲ್ಲಿ ಶ್ರೀ ಮಹಾರಾಣಾ ಪ್ರತಾಪಸಿಂಗ್ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಆರ್ ಎಲ್ ಮೇಳೆನವರ, ರಾಮಸಿಂಗ್ ಜಮಾದಾರ, ಮಂಜುನಾಥ ಹಣಗಿ, ಪ್ರಶಾಂತ್ ಬೆಟಗೇರಿ, ಶ್ರೀಕಾಂತ ಆಲೂರ, ಮಂಜುನಾಥ ಮೇಳೆನವರ, ಹನುಮಾನಸಿಂಗ್ ಜಮಾದಾರ, ಪರಶುರಾಮ ಕೆಂಚರ್ಲಿ, ಮಂಜುನಾಥ್ ಭಜಂತ್ರಿ, ಕಿರಣ ಬದಾಮಿ, ಚೇತನಸಿಂಗ್ ಯಲಬುರ್ಗಿ, ಪನ್ಯಾ ಬಾಕಳೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಲಕ್ಷ್ಮೇಶ್ವರದ ಸೇವಾ ಭಾರತಿ ಪ್ರತಿಷ್ಠಾನದ ಕಾರ್ಯಕರ್ತರು ಪಟ್ಟಣದ ಶಾಲಾ–ಕಾಲೇಜು, ಸಾರ್ವಜನಿಕ ಸ್ಥಳದಲ್ಲಿ ಸಸಿ ನೆಟ್ಟು ಪೋಷಿಸುವ ಕಾರ್ಯ ಮಾಡುತ್ತಿದ್ದು, ಲಕ್ಷ್ಮೇಶ್ವರ ಕೆಎಸ್‌ಆರ್‌ಟಿಸಿ ಸಾರಿಗೆ ಘಟಕದ ಎದುರಿನ ಬಡಾವಣೆಯಲ್ಲಿ ನಾಗರಿಕರ ಸಹಕಾರದೊಂದಿಗೆ ಸಸಿ ನೆಡುವ ಕಾರ್ಯಕ್ರಮ ಕೈಗೊಂಡರು. ಈ ಕಾರ್ಯದಲ್ಲಿ ಗಂಗಾಧರ ಪುರಾಣಿಕಮಠ, ವೀರೇಶ ಮಾಮನಿ, ಉಮೇಶ ಮಡಿವಾಳರ, ರವಿ ಕಲ್ಲೂರ, ಶಂಕರ ಬ್ಯಾಡಗಿ, ಅನಿಲ ಮುಳುಗುಂದ, ಮೌನೇಶ ಬಡಿಗೇರ, ಈಶ್ವರಪ್ಪ ಬನ್ನಿಕೊಪ್ಪ, ಶಿವಕುಮಾರ ಸಂಶಿ, ಚಂದ್ರು ಲಿಂಗಶೆಟ್ಟಿ, ವಿನಾಯಕ ವೇತಾಳ್, ರಾಜೋಳಿ, ಮಂಜುನಾಥ್ ಸುಣ್ಣದಮನಿ, ಕಾಂತು ರಾಜೋಳಿ ಮುಂತಾದವರು ಪಾಲ್ಗೊಂಡಿದ್ದರು.

### ಶ್ರೀ ಜಗದ್ಗುರು ಪಂಚಾಚಾರ್ಯ ಐಟಿಐ 30ನೇ ವರ್ಷದ ವಾರ್ಷಿಕೋತ್ಸವ ಜೂ.14ಕ್ಕೆ

# ಶ್ರೀ ಜ. ಪಂಚಾಚಾರ್ಯ ಯುಗಮಾನೋತ್ಸವ

■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ನಗರದ ಸಹ್ಯಾದ್ರಿ ಕಾಲೇಜ ಹಿಂಭಾಗದಲ್ಲಿರುವ ಶ್ರೀ ಜಗದ್ಗುರು ಪಂಚಾಚಾರ್ಯ ಐಟಿಐ 30ನೇ ವರ್ಷದ ವಾರ್ಷಿಕೋತ್ಸವ, ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಜೂನ್ 14ರಂದು ಬೆಳಿಗ್ಗೆ 11 ಗಂಟೆಗೆ ಜರುಗಲಿದೆ.

ಎಸ್.ಆರ್.ಎನ್. ಫೌಂಡೇಶನ್ ಹಾಗೂ ಮಹಾತ್ಮ ಎಜುಕೇಶನ್ ಸೊಸೈಟಿ ಅಧ್ಯಕ್ಷ ಎಸ್.ಆರ್. ನವಲಿ ಹಿರೇಮಠ ಸಮಾರಂಭವನ್ನು ಉದ್ಘಾಟಿಸುವರು. ಇದೇ ಸಂದರ್ಭದಲ್ಲಿ ಎಸ್‌ಜೆಪಿ ಐಟಿಐ ಹಳೆಯ ವಿದ್ಯಾರ್ಥಿಗಳ ಸಂಘದ ಉದ್ಘಾಟನೆಯನ್ನು ಶಾಸಕ ಚನ್ನಬಸಪ್ಪ ಎಸ್.ಎನ್. ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಶಿವಮೊಗ್ಗ ಜಿಲ್ಲಾ ಜಂಗಮ ಸಮಾಜದ ಗೌರವಾಧ್ಯಕ್ಷ ಟಿ.ವಿ. ಈಶ್ವರಯ್ಯ, ವೀರಶೈವ ಲಿಂಗಾಯತ ಸೇವಾ ಸಮಿತಿ ಅಧ್ಯಕ್ಷ ಎಸ್.ಎಸ್. ಜ್ಯೋತಿಪ್ರಕಾಶ, ವೀರಶೈವ ಕಲ್ಯಾಣ ಮಂಟಪದ ಕಾರ್ಯದರ್ಶಿ ಎನ್. ಜೆ. ರಾಜಶೇಖರ, ಶಿವಮೊಗ್ಗ ಜಿಲ್ಲಾ ವೀರಶೈವ ಜಂಗಮ ಅರ್ಚಕರ ಹಾಗೂ ಪುರೋಹಿತರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನಸ್ವಾಮಿ, ಕರಿಬಸವೇಶ್ವರ ದೇವಸ್ಥಾನದ ಅಧ್ಯಕ್ಷ ಹೆಚ್.ವಿ. ಮಹೇಶ್ವರಪ್ಪ, ಗಾಜನೂರು ಸರ್ಕಾರಿ ಮಹಿಳಾ ಐಟಿಐ ಪ್ರಾಚಾರ್ಯ ಬಿ.ಟಿ. ಶೇಖರಪ್ಪ ಭಾಗವಹಿಸುವರು.



ಜಗದೀಶ್ವರ ಸೋಲಾಪುರಮಠ ಹಾಗೂ ವಿಜಯಕುಮಾರ ಜಿ.ಎಂ. ಇವರಿಗೆ ಗುರುರಕ್ಷೆ ನೀಡಲಾಗುವುದು.

**ಉಚಿತ ಆರೋಗ್ಯ ತಪಾಸಣೆ:** ಅದೇ ದಿನ ಟಿ.ಎಮ್.ಎ.ಇ.ಎಸ್ ಆಯುರ್ವೇದ ಮಹಾವಿದ್ಯಾಲಯ ನಿಧಿಗೆ ಇವರ ಸಹಯೋಗ ಹಾಗೂ ಸಿಬ್ಬಂದಿಯ ಸಹಕಾರದಿಂದ ಉಚಿತ ಆರೋಗ್ಯ ತಪಾಸಣೆ ನಡೆಯಲಿದೆ.

**ವ್ಯಕ್ತಿತ್ವ ವಿಕಸನ ತರಬೇತಿ:** ಮಧ್ಯಾಹ್ನ ಐಟಿಐ ಹಿರಿಯ ವಿದ್ಯಾರ್ಥಿಗಳಿಗೆ ವ್ಯಕ್ತಿತ್ವ ವಿಕಸನ ಮತ್ತು ವೃತ್ತಿ ಮಾರ್ಗದರ್ಶನ ತರಬೇತಿ ನಡೆಯಲಿದೆ.

ಪಿಯುಸಿ, ಎಸ್.ಎಸ್.ಎಲ್.ಸಿ.ಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು.

ವಧು–ವರರ ಸಮಾವೇಶ: ಅದೇ ದಿವಸ ವೀರಶೈವ ಲಿಂಗಾಯತ ವಧು–ವರರ ಸಮಾವೇಶ ನಡೆಯಲಿದ್ದು, ಹರಪನಹಳ್ಳಿ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸುವರು.

ಶ್ರೀ ಜಗದ್ಗುರು ಪಂಚಾಚಾರ್ಯ ಐಟಿಐ ಸಂಸ್ಥಾಪಕ ವಿಘ್ನೇಶ್ವರಯ್ಯ ನೀ ಸೋಲಾಪುರ ಅಧ್ಯಕ್ಷತೆ ವಹಿಸುವರು. ಈ ಎಲ್ಲ ಕಾರ್ಯಕ್ರಮಗಳಲ್ಲಿ ಸಾರ್ವಜನಿಕರು, ಶ್ರೀಮಠದ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಎಸ್‌ಜೆಪಿ ಐಟಿಐ ಸಂಸ್ಥಾಪಕ ಅಧ್ಯಕ್ಷ ವಿಘ್ನೇಶ್ವರಯ್ಯ ನೀ ಸೋಲಾಪುರ ತಿಳಿಸಿದ್ದಾರೆ.

### ಸೇವಾ ನಿವೃತ್ತಿ ಪ್ರಯುಕ್ತ ಡಾ. ಟಿ.ಎನ್. ಗೋಡಿಯವರಿಗೆ ಸನ್ಮಾನ

# ಒಳ್ಳೆಯ ಗುಣಗಳೇ ನಿಜವಾದ ಆಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕನಕದಾಸ ಶಿಕ್ಷಣ ಸಮಿತಿಯ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾ ವಿದ್ಯಾಲಯದಲ್ಲಿ ಡಾ. ಟಿ.ಎನ್. ಗೋಡಿಯವರು ವಾಣಿಜ್ಯ ವಿಭಾಗದ ಮುಖ್ಯಸ್ಥರಾಗಿ, ಪ್ರಾಚಾರ್ಯರಾಗಿ 36 ವರ್ಷಗಳ ಅವಿಸ್ಮರಣೀಯ ಸೇವೆಯನ್ನು ಸಲ್ಲಿಸಿ ವಯೋನಿವೃತ್ತಿ ಹೊಂದಿದ ನಿಮಿತ್ತ ಅರುಣೋದಯ ವಾಯು ವಿಹಾರಿಗಳ ವಿವಿಧೋದ್ದೇಶಗಳ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು



ಗೋಡಿ ದಂಪತಿಗಳನ್ನು ಸನ್ಮಾನಿಸಿದರು.

ಸಂಘದ ನಿರ್ದೇಶಕ ಪ್ರೊ. ಬಿ.ಬಿ. ಮಾಲಗಿತ್ತಿ ಮಾತನಾಡಿ, ಮಾನವೀಯ ಸಂಬಂಧಗಳು ಗಟ್ಟಿಗೊಳ್ಳುವ ಭಾವನೆ ನಮ್ಮೆಲ್ಲರಲ್ಲಿ ಬೆಳೆಯಬೇಕು ಹಾಗೂ ಪ್ರಾಚೀನತೆಯ ಜೊತೆ–ಗೆ ಆಧುನಿಕತೆಯ ಅರಿವು ಮೂಡಿಸಿಕೊಳ್ಳುವುದು ಅಗತ್ಯ ಎಂದು ಹೇಳಿದರು.

ಸಂಘದ ಪ್ರಧಾನ ಕಾರ್ಯದರ್ಶಿ ವಾಯ್.ಕೆ. ಪಿಡಗಣ್ಣವರ ಮಾತನಾಡಿ, ನಮ್ಮ ಬದುಕು ಶಾಶ್ವತವಲ್ಲ. ಗಳಿಸಿದ ಸಿರಿ–ಸಂಪತ್ತು ಶಾಶ್ವತವಲ್ಲ. ಒಳ್ಳೆಯ ಗುಣ, ಉತ್ತಮ ಸಂಬಂಧ ಜೀವನದ ನಿಜವಾದ ಆಸ್ತಿ. ಹೀಗಾಗಿ ನಾವೆಲ್ಲರೂ ಜೀವನದಲ್ಲಿ ಏನನ್ನಾದರೂ ಸಾಧಿಸಬೇಕು ಮತ್ತು ಬದುಕು ಬಲಗೊಳ್ಳಲು ಸಂಸ್ಕೃತಿ, ಸಂಸ್ಕಾರ ಹೊಂದುವುದು ಅವಶ್ಯ. ಇವೆಲ್ಲವುಗಳನ್ನು ಮೈಗೂಡಿಸಿ ಕೊಂಡಿರುವ ಡಾ. ಟಿ.ಎನ್. ಗೋಡಿಯವರ ನಿವೃತ್ತ ಜೀವನ ಸುಖಮಯ ವಾಗಲೆಂದು ಹಾರೈಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ಟಿ.ಎನ್. ಗೋಡಿ, ನಮ್ಮ ಸಂಘದ ಎಲ್ಲಾ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ನಮ್ಮ ನಿವಾಸಕ್ಕೆ ಆಗಮಿಸಿ ಸನ್ಮಾನಿಸಿದ್ದು ತುಂಬಾ ಸಂತೋಷದ ಸಂಗತಿ ಎಂದರು.

ಈ ಸಂದರ್ಭದಲ್ಲಿ ಕೋಶಾಧಿಕಾರಿ ಎಂ.ಬಿ. ಕರಿಬಿಷ್ಠಿ, ನಿರ್ದೇಶಕರಾದ ಶೈಲಪ್ಪ ಅಂಗಡಿ, ಅಶೋಕ ವಡವಡಗಿ, ಸದಸ್ಯರುಗಳಾದ ಎಸ್.ಎಂ. ಯಂಡಿಗೇರಿ, ಜಿ.ಬಿ. ಚನ್ನಪ್ಪಗೌಡ್ರ, ಜಿ.ಬಿ. ಡೊನ್ನಿ ಮುಂತಾದವರು ಪಾಲ್ಗೊಂಡಿದ್ದರು. ಸಂಘದ ನಿರ್ದೇಶಕ ಹೆಚ್.ಎನ್. ಚಿಗರಿ ವಂದಿಸಿದರು.

### ವಿರಕ್ತಮಠದ ಗುರುಕುಲದ ದಾಸೋಹ ಸೇವೆಗೆ 7.25 ಲಕ್ಷ ರೂ ದಿನಸಿ ಪದಾರ್ಥ ದೇಣಿಗೆ

# ದಾನಿಗಳಿಗೆ ಪುಣ್ಯದ ಫಲ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶತಮಾನಗಳಿಂದ ಮಠ ಮಾನ್ಯಗಳು ನಡೆಸುತ್ತಿರುವ ತ್ರಿವಿಧ ದಾಸೋಹ ಸೇವೆಗೆ ತನುಮನಧನದ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಪುಣ್ಯಾತ್ಮರಿಗೆ ಈ ಸೇವೆಯ ಪುಣ್ಯದ ಫಲ ಪ್ರಾಪ್ತವಾಗುತ್ತದೆ ಎಂದು ಹೂವಿನ ಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಹೂವಿನಶಿಗ್ಲಿ ಗುರುಕುಲದ ಅನಾಥ, ಬಡಮಕ್ಕಳ ದಾಸೋಹ ಸೇವೆಗೆ ಹಲವು ವರ್ಷದಿಂದ ವರ್ಷಕ್ಕೆ 2 ಅವಧಿಗೆ ಲಕ್ಷಾಂತರ ರೂಗಳ ದಿನಸಿ ಪದಾರ್ಥ ನೀಡುವ ಕಲಬುರ್ಗಿ ತಾಲೂಕಿನ ಸೋನಾಳ ಗ್ರಾಮದ ವಿಜಯಕುಮಾರ ಸೂರ್ಯಕಾಂತ ಬಿರಾದಾರ ಅವರಿಗೆ ಗ್ರಾಮಸ್ಥರು ಮತ್ತು ಗುರುಕುಲ ಮಕ್ಕಳಿಂದ ಹಮ್ಮಿಕೊಳ್ಳಲಾಗಿದ್ದ ಸತ್ಕಾರ ನೆರವೇರಿಸಿ ಮಾತನಾಡಿದರು.



ಪ್ರಸ್ತುತ ದಿನಮಾನಗಳಲ್ಲಿ ಎಲ್ಲ ವಸ್ತುಗಳ ಬೆಲೆ ಏರಿಕೆ ಮತ್ತು ಸರ್ಕಾರದ ಸೌಲಭ್ಯವಿಲ್ಲದ್ದರಿಂದ ಗುರುಕುಲದಲ್ಲಿನ 300ಕ್ಕೂ ಹೆಚ್ಚು ಮಕ್ಕಳಿಗೆ ತ್ರಿವಿಧ ದಾಸೋಹ ಸೇವೆ ನೀಡುವುದು ಅತ್ಯಂತ ಕಷ್ಟದ ಕೆಲಸ. ಆದರೆ ಗುರುಕುಲದ ತ್ರಿವಿಧ ದಾಸೋಹದ ಶ್ರೇಷ್ಠ ಪರಂಪರೆ ಮುಂದುವರೆಯಬೇಕು, ಆ ಮೂಲಕ ಅನಾಥ, ಬಡ ಮಕ್ಕಳ ಬದುಕಿಗೆ ಆಸರೆಯಾಗಬೇಕು ಎಂಬುದು ಶ್ರೀಮಠದ ಉದ್ದೇಶ. ಲಿಂ.ನಿರಂಜನ ಜಗದ್ಗುರುಗಳ ಆಶೀರ್ವಾದಿಂದ ವಿಜಯಕುಮಾರ ಅವರಂತಹ ಪರಮ ಶ್ರೇಷ್ಠ ಭಕ್ತರು, ದಾನಿಗಳಿಂದ ಈ ಮಕ್ಕಳ ಸೇವೆ ಮಾಡಲು ಸಾಧ್ಯವಾಗುತ್ತಿದೆ ಎಂದರು.

ಈ ವೇಳೆ ನೆಹರು ಬಿರಾದಾರ, ಲೋಕೇಶ ಹನಮಶೆಟ್ಟಿ, ಸಂಜುಕುಮಾರ ಪಾಟೀಲ, ಶಿವಕುಮಾರ ಕೌಡಗಾಂವೆ, ಡಾ. ಪರಮೇಶ್ವರ ಬಿರಾದಾರ, ನಾಗಶೆಟ್ಟಿ ಕಾರಮುಂಗೆ, ರಾಜು ಲಾಂಡಗೆ, ರಾಜು ಬಿರಾದಾರ, ನಿಂಗಪ್ಪ ಹೆಬಸೂರ, ಅನ್ನದಾನಯ್ಯ ಹಿರೇಮಠ, ದೇವೇಂದ್ರಪ್ಪ ಸಣ್ಣ ಬಾಳಪ್ಪನವರ, ಆರ್.ಬಿ. ಬಡಿಗೇರ, ಪಿ.ಎಚ್. ಪಾಟೀಲ ಸೇರಿ ಶಿಕ್ಷಕ ವೃಂದ, ಸಿಬ್ಬಂದಿ, ಗುರುಕುಲದ ಮಕ್ಕಳು ಹಾಜರಿದ್ದರು.

ಸತ್ಕಾರ ಸ್ವೀಕರಿಸಿದ ವಿಜಯಕುಮಾರ ಬಿರಾದಾರ ಮಾತನಾಡಿ, ಮಕ್ಕಳ ಸೇವೆ ದೇವರ ಸೇವೆ ಎಂಬುದು ನನ್ನ ಹಿರಿಯರಿಂದ ಕಲಿತಿದ್ದೇನೆ. ಶ್ರೀಮಠವು ಬಡ, ಅನಾಥ ಮಕ್ಕಳಿಗಾಗಿ ಮಾಡುತ್ತಿರುವ ಸೇವೆಗೆ ತಮ್ಮದೊಂದು ಅಳಿಲು ಸೇವೆ. ಈ ಸೇವೆಗೆ ಅವಕಾಶ ಸಿಕ್ಕಿರುವುದು ನನ್ನ ಭಾಗ್ಯ ಮತ್ತು ಸಂತೃಪ್ತಿ ತಂದಿದೆ ಎಂದರು.

# ಬಿಜೆಪಿಯಿಂದ ವಿಜಯೋತ್ಸವ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನರೇಂದ್ರ ಮೋದಿಯವರು 3ನೇ ಬಾರಿಗೆ ಪ್ರಧಾನಮಂತ್ರಿಗಳಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ನಗರದ ಟಾಂಗಾಕೂಟ್ ಸರ್ಕಲ್‌ನಲ್ಲಿ ಬಿಜೆಪಿ ಮುಖಂಡರು, ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮವನ್ನಾಚರಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಹಿರಿಯರಾದ ಕಾಂತೀಲಾಲ ಬನ್ಸಾಲಿ, ಉಷಾ ದಾಸರ, ಭೀಮಸಿಂಗ ರಾಠೋಡ, ಪ್ರಶಾಂತ ನಾಯ್ಕರ, ರಾಘವೇಂದ್ರ ಯಳವತ್ತಿ, ಶಶಿಧರ ದಿಂಡೂರ, ಸುರೇಶ ಚಿತ್ತರಗಿ, ಸಂತೋಷ ಅಕ್ಕಿ, ಅರವಿಂದ ಕೆಲೂರ, ಅರವಿಂದ ಹುಲ್ಲೂರ, ಕಿಶನ್ ಮೇರವಾಡೆ, ಗಂಗಾಧರ ಹಬೀಬ, ಸುಧೀರ ಕಾಟಿಗರ, ನಾಗರಾಜ ಖೊಡೆ, ಸ್ವಾತಿ ಅಕ್ಕಿ, ರೇಖಾ ಬಂಗಾರಶೆಟ್ಟರ, ಶಂಕರ ಕಾಕಿ, ಮಹೇಶ ದಾಸರ, ಪಾರ್ವತಿ ಪಟ್ಟಣಶೆಟ್ಟಿ, ಕಮಲಾಕ್ಷಿ ಗೊಂದಿ, ಜಯಶ್ರೀ ಉಗಲಾಟದ, ರಮೇಶ ಸಜ್ಜಗಾರ, ಮಾಧುಸಾ ಮೇರವಾಡೆ, ನಾಗರಾಜ ತಳವಾರ ಮುಂತಾದವರು ಉಪಸ್ಥಿತರಿದ್ದರು.

# ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿ ವಿದ್ಯಾರ್ಥಿಗಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ಮೌಲಾನಾ ಅಜಾದ್ ಇಂಗ್ಲೀಷ್ ಮಾಧ್ಯಮ ಮಾದರಿ ಶಾಲೆಗೆ 2024–25ನೇ ಸಾಲಿನ 6ನೇ ತರಗತಿಯ ಆಂಗ್ಲ ಮಾಧ್ಯಮ ಪ್ರವೇಶಕ್ಕೆ ಜರುಗಿದ ಪರೀಕ್ಷೆಯಲ್ಲಿ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ 6 ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.

ಆಯ್ಕೆಯಾದ ವಿದ್ಯಾರ್ಥಿಗಳಾದ ಸಾಧಿಯಾ ಅಬ್ಬಿಗೇರಿ, ಹರ್ಷಿತಾ ಇಮರಾಪೂರ, ಗಿರೀಶ ಕವಲೂರ, ಅಸಾದ್ ಬಡ್ನಿ, ಚೈತನ್ಯಾ ಬೂದೂರು, ಸಮರ್ಥ ಶಿರೂರ, ಮಾರ್ಗದರ್ಶನ ನೀಡಿದ ಶಾಲೆಯ ಮುಖ್ಯೋಪಾಧ್ಯಾಯರಾದ ಎಚ್.ಎಂ. ನದಾಫ್ ಹಾಗೂ ಸಹಶಿಕ್ಷಕಿಯರಿಗೆ ಶಿಕ್ಷಣ ಸಮಿತಿಯ ಅಧ್ಯಕ್ಷರಾದ ರೇಣುಕಾ ಇಮರಾಪೂರ, ಉಪಾಧ್ಯಕ್ಷೆ ಮಲ್ಲಮ್ಮ ಕೊಪ್ಪದ, ಆಡಳಿತ ಮಂಡಳಿಯ ಸರ್ವ ಸದಸ್ಯರು ಹಾಗೂ ಶಿಕ್ಷಕ ವೃಂದದವರು ಅಭಿನಂದನೆ ಸಲ್ಲಿಸಿದ್ದಾರೆ.

# ಗಿಡ ನೆಟ್ಟು ಶುಭ ಕೋರಿದ ಬಿಜೆಪಿ ನಗರ ಘಟಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನರೇಂದ್ರ ಮೋದಿ ಅವರು ಭಾರತದ ಪ್ರಧಾನ ಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಬಿಜೆಪಿ ನಗರ ಘಟಕದಿಂದ ಪಟ್ಟಣದ ವೃದ್ಧಾಶ್ರಮ, ದೊಡ್ಡೂರ ರಸ್ತೆಯಲ್ಲಿನ ಮೈಲಾರಲಿಂಗೇಶ್ವರ ಶಿಬಾರಗಟ್ಟಿ ಮತ್ತು ಕೋರ್ಟ್ ಸರ್ಕಲ್ ಹತ್ತಿರ ಉದ್ಯಾನದಲ್ಲಿ ಅಶ್ವತ್ಥ ವೃಕ್ಷದ ಸಸಿ ನೆಡುವ ಮೂಲಕ ಮೋದಿಜಿ ಆಡಳಿತಕ್ಕೆ ಶುಭಕೋರಲಾಯಿತು.

ಈ ಕಾರ್ಯದಲ್ಲಿ ಪಕ್ಷದ



ಮುಖಂಡರಾದ ನಿಂಗಪ್ಪ ಬನ್ನಿ, ದುಂಡೇಶ ಕೊಟಗಿ, ಮಂಜುನಾಥ ಗೊರವರ, ಸೋಮಣ್ಣ ಉಪನಾಳ, ವಿನಯ ಪಾಟೀಲ, ಗಂಗಾಧರ ಮೆಣಸಿನಕಾಯಿ, ಶಕ್ತಿ ಕತ್ತಿ, ಅನಿಲ ಮುಳಗುಂದ, ವಿಜಯ ಕುಂಬಾರ, ಉಳವೇಶ ಪಾಟೀಲ, ಹಾಲಪ್ಪ ಸೂರಣಗಿ, ರಾಮು ಪೂಜಾರ, ಗಿರೀಶ ಚೌರಡ್ಡಿ, ಪ್ರಕಾಶ ಮಾದನೂರ, ಸತೀಶ ಕಾಡಣ್ಣವರ, ಮಂಜಯ್ಯ ಕಲಕೇರಿಮಠ, ಬಸವರಾಜ ಚಕ್ರಸಾಲಿ, ಸಂತೋಷ ಜಾವೂರ, ರಾಮು ನಾಯಕ, ಆಕಾಶ ಸೌದತ್ತಿ ಸೇರಿ ಹಿರಿಯರು, ಮುಖಂಡರು, ಪಕ್ಷದ ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಮೋದಿ ಮತ್ತೆ ಪ್ರಧಾನಿ: ಸಂಭ್ರಮಾಚರಣೆ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಕೇಂದ್ರದಲ್ಲಿ ನರೇಂದ್ರ ಮೋದಿ ಮತ್ತೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದಕ್ಕೆ ಮತ್ತು ಸಂಪೂರ್ಣ ಸಚಿವ ಸಂಪುಟವನ್ನು ರಚಿಸಿದ್ದಕ್ಕೆ ಅಭಿನಂದಿಸಿ ನರೇಗಲ್ಲದ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದರು.

ಈ ಸಂದರ್ಭದಲ್ಲಿ ನರೇಗಲ್ಲ



ಹೋಬಳಿ ಘಟಕದ ಬಿಜೆಪಿ ಅಧ್ಯಕ್ಷ ಉಮೇಶ ಸಂಗನಾಳಮಠ, ಶಶಿಧರ ಸಂಕನಗೌಡ್ರ, ಶ್ರೀಶೈಲಪ್ಪ ಬಂಡಿಹಾಳ, ಕುಮಾರಸ್ವಾಮಿ ಕೋರಧಾನ್ಯಮಠ, ಮಲ್ಲಿಕಾರ್ಜುನಗೌಡ ಭೂಮನಗೌಡ್ರ, ಯಲ್ಲಪ್ಪ ಮಣ್ಣೊಡ್ಡರ, ಮಹೇಶ ಶಿವಶಿಂಪರ, ಪ್ರಕಾಶ ಹಕ್ಕಿ, ಬಸವರಾಜ ವಂಕಲಕುಂಟಿ, ಫಕ್ಕಿರಪ್ಪ ಮಳ್ಳಿ, ಪ್ರಕಾಶ ಪಾಯಪ್ಪಗೌಡ್ರ, ಈರಣ್ಣ ಗುಜಮಾಗಡಿ, ಮಂಜುನಾಥ ಪಾಯಪ್ಪಗೌಡ್ರ, ಶ್ರೀಕಾಂತ ಮಣ್ಣೊಡ್ಡರ, ಲೋಕೇಶ ಮಣ್ಣೊಡ್ಡರ, ಪ್ರವೀಣ ಮಡಿವಾಳರ, ಹಸನ್ ಕಲೇಗಾರ, ರಮೇಶ ಕೋಲಕಾರ, ಶಿವಕುಮಾರ ಮಡಿವಾಳರ ಸೇರಿದಂತೆ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಇದ್ದರು.

ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಡಾ.ಅಮಿತ ಸತ್ತೂರ ಅಭಿಪ್ರಾಯ

# ಉತ್ತಮ ಆರೋಗ್ಯ ಅಭಿವೃದ್ಧಿಗೆ ರಹದಾರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಎಲ್ಲ ಸಂಪತ್ತುಗಳಿಗಿಂತ ಆರೋಗ್ಯ ಸಂಪತ್ತು ಬಹುಮುಖ್ಯ. ದುಬಾರಿ ದುನಿಯಾದಲ್ಲಿ ಗ್ರಾಮೀಣ ಮತ್ತು ಪಟ್ಟಣಗಳ ಬಡ ವರ್ಗದ ಜನರಿಗೆ ಉಚಿತವಾಗಿ ಉತ್ತಮ ಆರೋಗ್ಯ ಸೇವೆ, ಚಿಕಿತ್ಸೆ ಕಲ್ಪಿಸುವಲ್ಲಿ ಉಚಿತ ಆರೋಗ್ಯ ಶಿಬಿರಗಳು ಸಹಕಾರಿಯಾಗಿವೆ ಎಂದು ಖ್ಯಾತ ಹೃದಯರೋಗ ತಜ್ಞ ಡಾ.ಅಮಿತ್ ಸತ್ತೂರ ಹೇಳಿದರು.

ಅವರು ಪಟ್ಟಣದ ಬಾಲಾಜಿ ಆಸ್ಪತ್ರೆಯಲ್ಲಿ ಮಂಗಳವಾರ ಬಾಲಾಜಿ ಆಸ್ಪತ್ರೆ ಮತ್ತು ಹುಬ್ಬಳ್ಳಿಯ ಸುಚಿರಾಯು ಆಸ್ಪತ್ರೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ಮಾತನಾಡಿದರು.

ಇಂದಿನ ದಿನಮಾನಗಳಲ್ಲಿ ಕಲುಷಿತ ವಾತಾವರಣ, ಕಲಬೆರಕೆ ಆಹಾರ, ಒತ್ತಡದ ಬದುಕಿನಿಂದ ಮನುಷ್ಯರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಜನರು ಅನಾರೋಗ್ಯಕ್ಕೆ ಒಳಗಾಗದಂತೆ ಮುಂಜಾಗ್ರತೆ ವಹಿಸುವದು ಅಗತ್ಯ. ಉಚಿತ ಆರೋಗ್ಯ ತಪಾಸಣೆ ಶಿಬಿರಗಳು ಹೆಚ್ಚು ಉಪಯುಕ್ತವಾಗಿದ್ದು, ಈ ಹಿನ್ನೆಲೆಯಲ್ಲಿ ಶಾಸಕರಾಗಿ ಜನಸೇವೆಯಲ್ಲಿ ನಿರತರಾಗಿರುವ ಡಾ.ಚಂದ್ರು ಲಮಾಣಿ




ಅವರು ತಮ್ಮ ವೃತ್ತಿ ಮತ್ತು ಬಡ ಜನರ ಬಗ್ಗೆ ಹೊಂದಿರುವ ಕಾಳಜಿಯೇ ಇಂತಹ ಜನೋಪಯೋಗಿ ಕಾರ್ಯಕ್ರಮಗಳಿಗೆ ಕಾರಣ ಎಂದು ಹೇಳಿದರು.

ಕಾರ್ಯಕ್ರಮದ ರೂವಾರಿ ಶಾಸಕ ಡಾ.ಚಂದ್ರು ಲಮಾಣಿ ಮಾತನಾಡಿ, ಇದೀಗ ಎಲ್ಲೆಡೆ ಅನೇಕ ವೈದ್ಯ ವೃಂದವು ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ನೀಡುತ್ತಿದ್ದಾರೆ. ವೈದ್ಯರ ಬಗ್ಗೆ ಜನರಲ್ಲಿ ಅಪಾರ ಗೌರವವಿದೆ. ಕೋವಿಡ್ ನಂತರ ಆರೋಗ್ಯ ಸೇವೆಯಲ್ಲಿ ಅನೇಕ ಬದಲಾವಣೆಗಳನ್ನು ಕಂಡಿದ್ದೇವೆ. ಗ್ರಾಮೀಣ ಭಾಗದ ಸಾಮಾನ್ಯ ಜನರು ದೂರದ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಲಾಗದ ಸ್ಥಿತಿಯಲ್ಲಿದ್ದಾರೆ. ಸ್ವತಃ ನನಗೂ ಬಡತನದ ಬಗ್ಗೆ ಅರಿವಿದ್ದು ನೀಡಿದ ಆರೋಗ್ಯ ಸೇವೆಯೇ ನಾನು ಶಾಸಕನಾಗಲು ಅವಕಾಶ ಒದಗಿಸಿದೆ ಎಂದರು.

400ಕ್ಕೂ ಹೆಚ್ಚು ಜನರು ಶಿಬಿರದ ಪ್ರಯೋಜನ ಪಡೆದುಕೊಂಡರು. ಶಿಬಿರದಲ್ಲಿ ಇಸಿಜಿ, 2ಡಿ ಇಕೋ ಹಾಗೂ ಔಷಧಿಗಳನ್ನು ಉಚಿತವಾಗಿ ವಿತರಣೆ ಮಾಡಲಾಯಿತು. ತಜ್ಞ ವೈದ್ಯರಾದ ಡಾ. ರಾಜು ಕದಮ್, ಡಾ. ಜಯಪ್ರಭು ಉತ್ತೂರ, ಡಾ. ಗೋವಿಂದ ದೇಸಾಯಿ, ಡಾ. ಸಂದೀಪ ಕುಂಬಾರ, ಡಾ. ಸೀತಾ ಮುತಾಲಿಕ್, ಡಾ. ವೆಂಕಟೇಶ ಎಚ್.ವಿ., ಡಾ. ಮಾಂತೇಶ ಹೊಸಮನಿ, ಡಾ. ಪ್ರದೀಪ ಬಾಕಕೇರ, ನವೀನ ಬೆಳ್ಳಟ್ಟಿ, ಗಿರೀಶ ಚೌರಡ್ಡಿ, ಬಸವರಾಜ ಚಕ್ರಸಾಲಿ ಸೇರಿದಂತೆ ಅನೇಕರಿದ್ದರು.

ಕ್ಷೇತ್ರದ ಜನರ ಋಣ ತೀರಿಸಲು ನನಗಿರುವ ದೊಡ್ಡ ಅವಕಾಶ ಆರೋಗ್ಯ ಸೇವೆ. ನಿರಂತರವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಮಾಡಲಾಗುತ್ತದೆ. ಇಂತಹ ಶಿಬಿರದಿಂದ ಬಡ ಜನರಿಗೆ ಅನೂಕೂಲವಾದರೆ ಸಾರ್ಥಕತೆಯನ್ನು ಪಡೆದುಕೊಳ್ಳುತ್ತದೆ. ಬಿಡುವಿರದ ಸಮಯದಲ್ಲಿ ಉಚಿತ ಸೇವೆ ನೀಡಲು ಹುಬ್ಬಳ್ಳಿಯಿಂದ ಆಗಮಿಸಿದ ಎಲ್ಲ ವೈದ್ಯರಿಗೂ ಕ್ಷೇತ್ರದ ಜನತೆಯ ಪರವಾಗಿ ಧನ್ಯವಾದ ಅರ್ಪಿಸುವೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

## ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್

ವಿದ್ಯಾರ್ಥಿಗಳು ಅಕ್ಷರ ಜ್ಞಾನವನ್ನು ಪಡೆಯುವ ಮೂಲಕ ಗ್ರಾಮದ ಕೀರ್ತಿಯನ್ನು ಹೆಚ್ಚಿಸಬೇಕು ಎಂದು ಎಸ್‌ಡಿಎಂಸಿ ಅಧ್ಯಕ್ಷ ಕೂಡ್ಲೆಪ್ಪ ಹಡಪದ ಹೇಳಿದರು.

ಸಮೀಪದ ಮಾರನಬಸರಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಸಮವಸ್ತ್ರ ವಿತರಿಸಿ ಅವರು ಮಾತನಾಡಿದರು.

ಸ್ಪರ್ಧಾತ್ಮಕ ಯುಗದಲ್ಲಿ ಅಕ್ಷರ ಜ್ಞಾನಕ್ಕೆ ಅತ್ಯಂತ ಮಹತ್ವವಿದೆ ಎಂಬುದನ್ನು ವಿದ್ಯಾರ್ಥಿಗಳು ಹಾಗೂ ಪಾಲಕರು ತಿಳಿದುಕೊಳ್ಳಬೇಕು. ಗುಣಮಟ್ಟದ ಶಿಕ್ಷಣ ಪಡೆದಾಗ ಮಾತ್ರ ಸಮಾಜದಲ್ಲಿ ಉತ್ತಮ ನಾಗರಿಕನಾಗಿ ಬಾಳಲು ಸಾಧ್ಯ ಎಂದರು.

ಬಸವರಾಜ ಮಾರನಬಸರಿ ಮಾತನಾಡಿ, ಸದೃಢ ನಾಡು ಕಟ್ಟಲು ಹಾಗೂ ಗ್ರಾಮದ ಕೀರ್ತಿಯನ್ನು ಹೆಚ್ಚಿಸಲು ವಿದ್ಯಾರ್ಥಿಗಳು ಅಕ್ಷರ ಜ್ಞಾನ ಹೊಂದುವುದು ಅವಶ್ಯಕವಾಗಿದೆ. ವಿದ್ಯಾರ್ಥಿಗಳು ಅಕ್ಷರ ಜ್ಞಾನದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಅನೇಕ ಸೌಲಭ್ಯಗಳನ್ನು ಸರ್ಕಾರ ಒದಗಿಸುತ್ತಿದೆ. ವಿದ್ಯಾರ್ಥಿಗಳು ಮತ್ತು ಪಾಲಕರು ಸರ್ಕಾರ ನೀಡುವ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಸಮಾಜದ ಜೊತೆಗೆ ಸಮುದಾಯದ ಉನ್ನತಿಗೆ ಶ್ರಮಿಸಬೇಕು ಎಂದರು.

ಈ ವೇಳೆ ಮುತ್ತಪ್ಪ ಬಾರಕೇರ, ಅನಿತಾ ಪತ್ತಾರ, ಕವಿತಾ ಹಿರೇಮಠ, ಶರಣಮ್ಮ ಡಂಬಳ, ಅನ್ನಪೂರ್ಣ ಗಡಾದ, ಎಸ್.ಇ. ಹೊರಪೇಟಿ, ಎಫ್.ಬಿ. ಮಾದರ, ಜೆ. ಜಾನಪಾಲ್, ಎಂ.ಕೆ. ಸರ್ವಿ, ಎಸ್.ಎಸ್. ಅವಟಿ, ಬಿ.ಎಸ್. ಗುಗ್ಗರಿ, ಎಂ.ಜಿ. ಮಕಾನದಾರ, ಬಿ.ಎಫ್. ಚೌಡಕಿ ಮುಂತಾದವರಿದ್ದರು.

## ಪತಂಜಲಿ ಯೋಗ ಸಮಿತಿಯಿಂದ ದೊಡ್ಡನಿಯವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುನಸಿಪಲ್ ಮೈದಾನದ ಪತಂಜಲಿ ಯೋಗ ಸಮಿತಿಯ ನಿರಂತರ ಕಕ್ಷೆಯಿಂದ ಕಳೆದ ತಿಂಗಳು ಹಮ್ಮಿಕೊಂಡ ಕಾಶಿ-ಅಯೋಧ್ಯ ಯಾತ್ರೆಯನ್ನು ದೊಡ್ಮನಿ ದಂಪತಿಗಳು ಅಚ್ಚುಕಟ್ಟಾಗಿ ಮಾಡಿಸಿದ್ದಕ್ಕಾಗಿ ಅವರಿಗೆ ಪತಂಜಲಿ ಯೋಗ ಸಮಿತಿಯ 5 ಸಂಘಟನೆಗಳ ಪರವಾಗಿ ಅಭಿನಂದನಾ ಸಮಾರಂಭವನ್ನು ಮುನಸಿಪಲ್ ಮೈದಾನದಲ್ಲಿ ಏರ್ಪಡಿಸಲಾಗಿತ್ತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ದೊಡ್ಡಮನಿ, ತಾವೆಲ್ಲರೂ ಸಹಕರಿಸಿದ್ದಕ್ಕಾಗಿ ಈ ಪ್ರವಾಸ ಯಶಸ್ವಿಯಾಯಿತು. ವಿದ್ಯಾಭ್ಯಾಸ ಮಾಡಿದ ಶಾಲೆಯಲ್ಲಿಯೇ ಸನ್ಮಾನ ಆಗುತ್ತಿರುವುದು ಮರೆಯಲಾರದ ನೆನಪು ಎಂದರು.

ಪ್ರವಾಸದ ನೇತೃತ್ವವನ್ನು ಜಿಲ್ಲಾ ಖಜಾಂಚಿ ಕಂಠೆಪ್ಪ ಗುಗ್ಗರಿ, ಜಿಲ್ಲಾ ಪ್ರಭಾರಿ ಗಿರಿಯಪ್ಪ ಮಡಿವಾಳರ ಹಾಗೂ ಮಹಿಳಾ ಪ್ರಭಾರಿ ಶೋಭಾ ಗುಗ್ಗರಿ ವಹಿಸಿದ್ದರು. ಈ ಸಂದರ್ಭದಲ್ಲಿ ಕಂಠೆಪ್ಪ ಗುಗ್ಗರಿ, ಗಿರಿಯಪ್ಪ ಮಡಿವಾಳರ, ಶೋಭಾ ಗುಗ್ಗರಿ, ಶ್ರೀ ನಾರಾಯಣಪೂರ, ಬಸಣ್ಣ ಎಚ್ಚಲಗಾರ, ಬಸವರಾಜ ಹಿರೇಮಠ ಮುಂತಾದವರು ಪ್ರವಾಸದ ಕುರಿತು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ನಾಗರತ್ನಾ ಬಡಿಗಣ್ಣವರ ನಿರೂಪಿಸಿದರು. ಶೋಭಾ ಗುಗ್ಗರಿ ವಂದಿಸಿದರು.

## ಧ್ವನಿಮುದ್ರಣಕ್ಕೆ ಹೊರಟ 'ಸುಮಾ'

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಓಂಸಾಯಿ ಸಿನಿಮಾಸ್ ಬ್ಯಾನರಿನಲ್ಲಿ ನಿರ್ಮಾಣ ವಾಗುತ್ತಿರುವ ಮಹಿಳಾ ಪ್ರಧಾನ ಕಥಾಹಂದರ ಹೊಂದಿರುವ 'ಸುಮಾ' ಸಿನಿಮಾದ ಚಿತ್ರೀಕರಣ ಸಂಪೂರ್ಣ ಮುಕ್ತಾಯಗೊಂಡು ಧ್ವನಿಮುದ್ರಣ ಕಾರ್ಯದಲ್ಲಿ ತೆ-ಊಡಗಿದೆ.

'ಸುಮಾ' ಚಿತ್ರದ ಚಿತ್ರೀಕರಣ ಮಂಡ್ಯ ಜಿಲ್ಲೆಯ ಕೆ.ಎಂ. ದೊಡ್ಡಿ (ಭಾರತೀನಗರ), ಆಲಭುಜನಹಳ್ಳಿ, ನಗರಕೆರೆ ಮತ್ತು ಮಾಲಗಾರನಹಳ್ಳಿಯ ಸುತ್ತಮುತ್ತ ನಡೆದರೆ, ಹಾಡುಗಳ ಚಿತ್ರೀಕರಣಕ್ಕಾಗಿ ತಂಡ ಊಟಿಗೆ ತೆರಳಿತ್ತು.

ಈ ಹಿಂದೆ ನಾಲ್ಕು ಸಿನಿಮಾಗಳನ್ನು ನಿರ್ದೇಶಿಸಿ ಸೈ ಎನಿಸಿಕೊಂಡಿರುವ ರಶ್ಮಿ ಎಸ್ 'ಸುಮಾ' ಸಿನಿಮಾಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದು, ಮೈಸೂರು ಮೂಲದ



ಪ್ರದೀಪ್ ಗೌಡ ನಾಯಕನಾಗಿ, ನಾಯಕಿಯಾಗಿ ಮೊದಲ ಬಾರಿಗೆ ಮಾನ್ಯತಾ ನಾಯ್ಡು ನಟಿಸಿದ್ದಾರೆ.

ಈ ಸಿನಿಮಾಕ್ಕೆ ದೇವ್ರೂ, ವಿನಾಯಕ್ ರೇವಡಿ ಬಾಗಲಕೋಟೆ ಮತ್ತು ಗಗನ್ ಆರ್ ಇವರ ಛಾಯಾಗ್ರಹಣ, ಮುತ್ತುರಾಜ್ ಟಿ. ಸಂಕಲನವಿದೆ. ಸಿನಿಮಾದ ಹಾಡುಗಳಿಗೆ ವೇದಾಂತ್ ಅತಿಶಯ್ ಜೈನ್ ಸಂಗೀತವಿದ್ದು, ಸತೀಶ್ ಜೋಶಿ ಹಾವೇರಿ ಮತ್ತು ಪ್ರದೀಪ್ ಗೌಡ ಅವರ ಸಾಹಿತ್ಯವಿದೆ. ಮೇಘನ ಹಳಿಯಾಳ ಮತ್ತಿತರರು ಹಾಡುಗಳಿಗೆ ಧ್ವನಿ ನೀಡಿದ್ದು, ಪತ್ರಿಕಾಸಂಪರ್ಕ ಕಾರ್ತಿಕ್ ಸುಧನ್, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಅವರದಿದೆ. ಸಿನಿಮಾಕ್ಕೆ ರಂಗಸ್ವಾಮಿ ಟಿ ಸಹ ನಿರ್ಮಾಪಕರಾಗಿದ್ದಾರೆ.

ಚಿತ್ರತಂಡದ ಯೋಜನೆಯಂತೆ, ಇದೇ ಆಗಸ್ಟ್ ವೇಳೆಗೆ 'ಸುಮಾ' ಸಿನಿಮಾದ ಪೋಸ್ಟ್ ಪ್ರೊಡಕ್ಷನ್ಸ್ ಕೆಲಸಗಳನ್ನು ಪೂರ್ಣಗೊಳಿಸಿ, ಅಕ್ಟೋಬರ್‌ನಲ್ಲಿ ಪ್ರೇಕ್ಷಕರ ಮುಂದೆ ತರುವ ಯೋಚನೆಯಲ್ಲಿದೆ.

## ಇಂದು ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮವನ್ನು ಜೂನ್ 12 ರಂದು ಬೆ 9.30 ಗಂಟೆಗೆ ನಗರದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಫಂಕ್ಷನ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ದಿವಾಣಿ ನ್ಯಾಯಾಧೀಶರಾದ ಸಿ.ಎಸ್.ಶಿವನಗೌಡ್ರ ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿ ಅಧ್ಯಕ್ಷರಾದ ವೈಶಾಲಿ ಎಂ.ಎಲ್. ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಅನ್ನಪೂರ್ಣ ಗಾಣಿಗೇರ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಂ.ಐ. ಹಿರೇಮನಿ ಪಾಟೀಲ, ಕಾರ್ಮಿಕ ಇಲಾಖೆ ಜಿಲ್ಲಾ ಕಾರ್ಮಿಕ ಅಧಿಕಾರಿ ಮೊಹಮ್ಮದ್ ಅಕ್ರಂ ಅಲ್ಲಾಪುರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ಶೆಟ್ಟೆಪ್ಪನವರ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಎಂ.ಎ. ರಡ್ಡೇರ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರವಿ ಗುಂಜೀಕರ್ , ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ವಸಂತ ಮಡ್ಲೂರ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ರಫೀಕಾ ಹಳ್ಳೂರ, ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಕೊಟ್ರೇಶ್ ಮೆಣಸಿನಕಾಯಿ, ಕಾರ್ಮಿಕ ಇಲಾಖೆ ನಿರೀಕ್ಷಕರಾದ ಉಮೇಶ್ ಹುಲ್ಲಣ್ಣವರ, ಗಿರೀಶ್ ಬಂಕದಮನಿ, ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್.ಬುರಡಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

## ಕೇಂದ್ರದ ವಿರುದ್ಧ ಜೈರಾಮ್ ವಾಗ್ದಾಳಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜೂನ್ 10 ರಂದು ರಾಜ್ಯಗಳಿಗೆ ತೆರಿಗೆ ಹಂಚಿಕೆಯನ್ನು ಬಿಡುಗಡೆ ಮಾಡಲು ಅಧಿಕಾರ ನೀಡಿದ ನಂತರ ಕಾಂಗ್ರೆಸ್ ಪಕ್ಷವು ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ. "ಇದು ಮೂರನೇ ದರ್ಜೆಯ ಪಿಆರ್" ಎಂದು ಹೇಳಿದೆ. "ಕೆಲವು ರಾಜ್ಯಗಳಿಗೆ ನ್ಯಾಯಸಮ್ಮತವಾಗಿ "ಪ್ರಸಾದ"ದ ರೀತಿ ತೆರಿಗೆ ಪಾಲು ಪಾವತಿಸಲು ಪ್ರಯತ್ನಿಸುತ್ತಿದೆ" ಎಂದು ಹೇಳಿದೆ.

ರಾಜ್ಯಗಳ ಪಾಲಿನ 1,39,750 ಕೋಟಿ ರೂಪಾಯಿ ತೆರಿಗೆ ಹಂಚಿಕೆಯನ್ನು ಕೇಂದ್ರವು ಸೋಮವಾರ ಅಧಿಕೃತಗೊಳಿಸಿದೆ.

ಜೂನ್ 2024 ರ ವಿಕೇಂದ್ರೀಕರಣದ ಮೊತ್ತವನ್ನು ನಿಯಮಿತವಾಗಿ ಬಿಡುಗಡೆ ಮಾಡುವುದರ ಹೊರತಾಗಿ, ಒಂದು ಹೆಚ್ಚುವರಿ ಕಂತು ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ ಎಂದು ಹಣಕಾಸು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಈ ಬಗ್ಗೆ ಪ್ರತಿಕ್ರಿಯಿಸಿದ್ದು, "ರಾಜ್ಯಗಳಿಗೆ ಪ್ರಮುಖ ತೆರಿಗೆ ಹಂಚಿಕೆಯಾಗಿ ಏನನ್ನು ವಿಧಿಸಲಾಗುತ್ತಿದೆ ಎಂಬುದನ್ನು ಹಣಕಾಸು ಸಚಿವಾಲಯವು ಇದೀಗ ಪ್ರಕಟಿಸಿದೆ. ಪ್ರಧಾನಮಂತ್ರಿಯ ಆದೇಶದ ಮೇರೆಗೆ ನಿಸ್ಸಂದೇಹವಾಗಿ ಇದನ್ನು 'ಮೂರನೇ ದರ್ಜೆಯ ಪಿಆರ್' ಮಾಡಲಾಗಿದೆ. ರಾಜ್ಯಗಳಿಗೆ ತೆರಿಗೆ ಹಂಚಿಕೆಗಳು ಜೈವಿಕವಲ್ಲದ ಪುರುಷರಿಂದ ಅಲ್ಲ, ಅವು ಹಣಕಾಸು ಆಯೋಗದಿಂದ ನಿರ್ಧರಿಸಲ್ಪಟ್ಟ ಸಾಂವಿಧಾನಿಕ ಅರ್ಹತೆಗಳಾಗಿವೆ" ಎಂದು ಎಕ್ಸ್ ಪೋಸ್ಟ್‌ನಲ್ಲಿ ಹೇಳಿದ್ದಾರೆ.

ಪ್ರಸ್ತುತ, ಕೇಂದ್ರವು ಸಂಗ್ರಹಿಸುವ ತೆರಿಗೆಯ 41 ಪ್ರತಿಶತವನ್ನು ಒಂದು ಆರ್ಥಿಕ ವರ್ಷದಲ್ಲಿ ರಾಜ್ಯಗಳಿಗೆ 14 ಕಂತುಗಳಲ್ಲಿ ವಿತರಿಸಲಾಗುತ್ತದೆ.

ಈ ಬಿಡುಗಡೆಯೊಂದಿಗೆ, 10 ಜೂನ್ 2024 ರವರೆಗೆ ರಾಜ್ಯಗಳಿಗೆ (ಎಫ್‌ವೈ 2024-25) ವಿತರಿಸಲಾದ ಒಟ್ಟು ಮೊತ್ತವು 2,79,500 ಕೋಟಿ ಆಗಿದೆ.

ಕಪ್ಪತ್ತಗಿರಿಯ ಪರಿಸರೋತ್ಸವ ಕಾರ್ಯಕ್ರಮದಲ್ಲಿ ಪ್ರಿಯಾಂಕಾ ನಡುವಿನಮನಿ

## ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಪ್ಪತ್ತಗಿರಿ ಫೌಂಡೇಶನ್ ಗದಗ, ಕಪ್ಪತ್ತಗಿರಿ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾ ವೇದಿಕೆಯ ವತಿಯಿಂದ ಪರಿಸರ ದಿನಾಚರಣೆ ಪ್ರಯುಕ್ತ ಕಪ್ಪತಗುಡ್ಡದಲ್ಲಿರುವ ಕಪ್ಪತ್ತಮಲೇಶ್ವರ ದೈವಿ ವನದಲ್ಲಿ ಪರಿಸರೋತ್ಸವ ಕಾರ್ಯಕ್ರಮ ಜರಗಿತು.

ಡಾ. ವೆಂಕಟೇಶ್ ರಾಠೋಡ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಾತಾವರಣ ಮತ್ತು ಮನುಷ್ಯನ ಸ್ಥಿತಿ ಆರೋಗ್ಯ ಕೆಟ್ಟ ಮೇಲೆ ಜನರು ವೈದ್ಯರ ಹತ್ತಿರ ಬರುತ್ತಾ-ರೆ. ಆರೋಗ್ಯ ಹದಗೆಡುವ ಮುನ್ನವೇ ನಮ್ಮ ಪರಿಸರವನ್ನು ಚೆನ್ನಾಗಿ ಇಟ್ಟುಕೊಂಡರೆ ನಮ್ಮ ಆರೋಗ್ಯ ಕೂಡ ಸರಿಯಾಗಿ ಇರುತ್ತದೆ. ಪರಿಸರ ಮಾನವನಿಗೆ ಒಂದು ಆರೋಗ್ಯ ಕೊಂಡಿ ಇದನ್ನು ಕಳಚದಂತೆ ನೋಡಿಕೊಳ್ಳೋಣ ಎಂದರು.

ಎಸ್.ಕೆ. ಆಡಿನ ಮಾತನಾಡಿ, ಕಪ್ಪತ್ತಗಿರಿ ನಡೆದು ಬಂದ



ಹಾದಿಯನ್ನು ಮೆಲುಕು ಹಾಕಿ, ಸಂಸ್ಥಾಪಕ ಅಧ್ಯಕ್ಷರ ಆಸೆಯಂತೆ ಪರಿಸರ ದಿನಾಚರಣೆ ಕಾರ್ಯಕ್ರಮ ಪ್ರತಿ ವರ್ಷ ಕಪ್ಪತ್ತಗಿರಿಯಲ್ಲಿ ನಡೆಯುತ್ತಿದ್ದು, ವೇದಿಕೆಯ ಮುಖಾಂತರ ಮಾಡಿದ ಹಲವಾರು ಸಾಮಾಜಿಕ ಕೆಲಸ ಕಾರ್ಯಗಳನ್ನು ತಿಳಿಸಿದರು.

ಪ್ರಿಯಾಂಕ ನಡುವಿನಮನಿ ಮಾತನಾಡಿ, ನಗರದ ಅಭಿವೃದ್ಧಿಯ ನೆಪದಲ್ಲಿ ಅರಣ್ಯ ಪ್ರದೇಶ ಕಡಿಮೆಯಾಗುತ್ತಿದೆ. ಪರಿಸರದ ಹಸಿರು ಕಡಿಮೆಯಾದರೆ ನಮ್ಮ ಆಯಸ್ಸು ಕೂಡ ಕಡಿಮೆಯಾಗುತ್ತದೆ. ನಾವೆಲ್ಲರೂ ಪರಿಸರ ಉಳಿಸುವ ಜವಾಬ್ದಾರಿ ವಹಿಸೋಣ ಎಂದರು.

ಅರುಣಾ ನರೇಂದ್ರ, ಪಂಚಯ್ಯ ಹಿರೇಮಠ, ಐ.ಕೆ. ಕಮ್ಮಾರ, ಅಧ್ಯಕ್ಷತೆ ವಹಿಸಿದ್ದ ಚಂದ್ರಕಲಾ ಇಟಗಿಮಠ ಮಾತನಾಡಿದರು.

ಬೆಂಗಳೂರಿನ ಸಾಹಿತ್ಯ ಅಕಾಡೆಮಿಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ವ್ಹಿ.ಹರೀಶಕುಮಾರ ಹಾಗೂ ಪಿಪಿಜಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಬಸವರಾಜ ಗಾಣಿಗೇರರನ್ನು ಸನ್ಮಾನಿಸಲಾಯಿತು.

ವಿಮರ್ಶಕ ಯಲ್ಲಪ್ಪ ಹರ್ನಾಳಗಿ ಕವಿಗೋಷ್ಠಿಯನ್ನು ಉದ್ಘಾಟಿಸಿದರು.

ಮರುಳು ಸಿದ್ದಪ್ಪ ದೊಡ್ಡಮನಿ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದರು.

ಸೌಮ್ಯ ಹಿರೇಮಠ ಪ್ರಾರ್ಥಿಸಿದರು. ನೀಲಮ್ಮ ಅಂಗಡಿ ಸ್ವಾಗತಿಸಿದರು.

ಮಹಾಂತೇಶ ಅಣ್ಣಿಗೇರಿ ನಿರೂಪಿಸಿದರೆ, ತೋಟಯ್ಯ ಗುಡ್ಡಿಮಠ ವಂದಿಸಿದರು.

## ಜಿಲ್ಲಾ ಮಟ್ಟದ ಯೋಗ ಚಿತ್ರಕಲಾ ಸ್ಪರ್ಧೆ


■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ, ಗದಗ ಜಿಲ್ಲಾ ಯೋಗ ಒಕ್ಕೂಟ ಹಾಗೂ ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆ ಇವರುಗಳ ಸಹಯೋಗದಲ್ಲಿ ಮುಂಬರುವ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಯೋಗೋತ್ಸವ-24 ಕಾರ್ಯಕ್ರಮಗಳ ಅಡಿಯಲ್ಲಿ ಗದಗ ಜಿಲ್ಲಾ ಮಟ್ಟದ ಚಿತ್ರಕಲಾ ಸ್ಪರ್ಧೆ ಆಯೋಜಿಸಲಾಗಿದೆ.

ಸ್ಪರ್ಧೆಯು ಕೇವಲ ಚಿತ್ರಕಲಾ ಶಿಕ್ಷಕ-ಶಿಕ್ಷಕಿಯರು ಮತ್ತು ಚಿತ್ರಕಲಾ ವಿದ್ಯಾರ್ಥಿಗಳಿಗಾಗಿ ಇರುವುದು. ಯೋಗ ವಿಷಯ ಪ್ರತಿಪಾದಿಸುವ ಚಿತ್ರವನ್ನು ನಾರ್ವೆ ಹಾಫ್ ಇಂಪಿರಿಯಲ್ ಸೈಜ್ ಪೇಪರಿನಲ್ಲಿ ಯಾವದೇ ಕಲರ್ ಇಲ್ಲವೆ ಮಿಕ್ಸ್ ಮೀಡಿಯಾದಲ್ಲಿ ಪೂರ್ಣಗೊಳಿಸಿರುವ ತಮ್ಮ ಕಲಾಕೃತಿಯನ್ನು ಈ ಕೆಳಗೆ ತಿಳಿಸಿರುವ ವಿಳಾಸದಲ್ಲಿ ತಲುಪಿಸಬೇಕು. ಸ್ಪರ್ಧೆಯಲ್ಲಿ ಆಯ್ಕೆಯಾದ ಮೂರು ಉತ್ತಮ ಕೃತಿಗಳ ಕಲಾಕಾರರಿಗೆ ಪ್ರಮಾಣ ಪತ್ರ ಮತ್ತು 500 ರೂ. ನಗದು ಬಹುಮಾನ ನೀಡಲಾಗುತ್ತಿದ್ದು, ಪ್ರವೇಶ ಉಚಿತವಾಗಿದೆ.

ಕಲಾಕೃತಿಗಳನ್ನು ತಲುಪಿಸಲು ಕೊನೆಯ ಜೂನ್ 19 ಆಗಿದೆ. ಹೆಚ್ಚಿನ ಮಾಹಿತಿ ಹಾಗೂ ತಾವು ರಚಿಸಿದ ಕಲಾಕೃತಿಗಳನ್ನು ಕೃಷ್ಣ ಕೆ.ಎಂ., ಪ್ರಾಚಾರ್ಯರು, ವಿಜಯ ಕಲಾ ಮಂದಿರ, ವಿಜಯ ಚಿತ್ರಕಲಾ ಮಹಾವಿದ್ಯಾಲಯ, ಕೃಷ್ಣಾ ಟಾಕೀಜ್ ಹತ್ತಿರ-ಗದಗ ದೂರವಾಣಿ ಸಂಖ್ಯೆ-9449418842 ಇಲ್ಲಿಗೆ ತಲುಪಿಸಬೇಕು.

ರಾಷ್ಟ್ರೀಯ ಕಾರ್ಯಕ್ರಮವಾಗಿರುವ ಈ ಸ್ಪರ್ಧೆಯಲ್ಲಿ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಸಂಘಟಿಕರ ಪರವಾಗಿ ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ತಿಳಿಸಿದ್ದಾರೆ.



ನರೇಗಲ್ ಸಮೀಪದ ಕೋಡಿಕೊಪ್ಪದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ ಹಾಗೂ ಸಮವಸ್ತ್ರಗಳನ್ನು ವಿತರಿಸಲಾಯಿತು. ಈ ವೇಳೆ ಮುಖ್ಯ ಶಿಕ್ಷಕಿ ಎಲ್.ಎಸ್. ಶಿವಪ್ಪಗೌಡ್ರ, ಪ.ಪಂ. ಸದಸ್ಯ ಕುಮಾರಸ್ವಾಮಿ ಕೋರಧಾನ್ಯಮಠ, ಬಸನಗೌಡ ಉದ್ದಣ್ಣವರ, ಎಸ್. ಕೆ. ಪಾಟೀಲ, ಬಿ.ಬಿ. ಹಳ್ಳೂರ, ಬಿ.ಎಸ್. ಕರಮುಡಿ, ಲಕ್ಷ್ಮಿ ಗಂಗಾಪೂರ, ಜೆ.ಡಿ. ಶಾಲ್ದಾರ್, ನಾಗರತ್ನಾ ಹುಬ್ಬಳ್ಳಿಕರ್ ಸೇರಿದಂತೆ ಎಸ್‌ಡಿಎಂಸಿ ಸದಸ್ಯರು, ಶಾಲೆಯ ಸಿಬ್ಬಂದಿಗಳು ಇದ್ದರು.

## 'ಶ್ರೇಷ್ಠ ಕೃಷಿಕ' ಪ್ರಶಸ್ತಿ ಪ್ರದಾನ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿಯ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಆದಾಯ ದ್ವಿಗುಣಗೊಂಡ ರೈತರಿಗೆ 'ಶ್ರೇಷ್ಠ ಕೃಷಿಕರು' ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಕೃಷಿ ತಂತ್ರಜ್ಞಾನ ಅನ್ವಯಿಸುವಿಕೆ ಹಾಗೂ ಸಂಶೋಧನಾ ಸಂಸ್ಥೆಯ ಸಹಯೋಗದೊಂದಿಗೆ ಕೃಷಿ ವಿಜ್ಞಾನ ಕೇಂದ್ರದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಉಪ ಕೃಷಿ ನಿರ್ದೇಶಕರಾದ




ಸ್ಫೂರ್ತಿ ಜಿ.ಎಸ್ ಮಾತನಾಡಿ, ಕೃಷಿ ಇಲಾಖೆಯಲ್ಲಿ ಈ ವರ್ಷ ಮುಂಗಾರು ಹಂಗಾಮಿನಲ್ಲಿ ದೊರೆಯುವ ಬೀಜ, ಗೊಬ್ಬರ, ಯಂತ್ರೋಪಕರಣಗಳು ಹಾಗೂ ಕೃಷಿ ಪರಿಕರಗಳ ಕುರಿತು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕೇಂದ್ರಮುಖ್ಯಸ್ಥೆ ಡಾ. ಸುಧಾ ಮಂಕಣಿ, ಎ.ಎಸ್.ಎಫ್ ಕಾರ್ಯದರ್ಶಿಗಳು ಹಾಗೂ ಕೆವಿಕೆ ಸಲಹೆಗಾರರಾದ ಡಾ. ಎಲ್.ಜಿ. ಹಿರೇಗೌಡರ, ನಿವೃತ್ತ ವಿಜ್ಞಾನಿ ಎಸ್.ಎಚ್. ಆದಾಪೂರ, ಎಸ್.ಕೆ. ಮುದ್ಲಾಪೂರ, ಪ್ರಶಸ್ತಿ ಸ್ವೀಕರಿಸಿದ ಮಂಗಲಾ ನೀಲಗುಂದ ಮಾತನಾಡಿದರು.

ಕಾರ್ಯಕ್ರಮದಲ್ಲಿ ಒಟ್ಟು 85 ಜನ ರೈತರಿಗೆ ಶ್ರೇಷ್ಠ ಕೃಷಿಕ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಎನ್.ಎಚ್. ಭಂಡಿ ಸ್ವಾಗತಿಸಿ, ವಂದಿಸಿದರು. ಡಾ.ವಿನಾಯಕ ನಿರಂಜನ ಕಾರ್ಯಕ್ರಮ ನಿರೂಪಿಸಿದರು.

# ರೈತರಿಗೆ ಸಲಹೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಬಹುತೇಕ ಕಡೆ ಧಾರಾಕಾರ ಮಳೆಯಾಗಿದ್ದು, ಭಾಗಶಃ ಮೋಡ ಕವಿದ ವಾತಾವರಣವಿದೆ. ರೈತರು ಬಿತ್ತನೆಗೆ ಅವಸರ ಮಾಡದೇ, ಬಿತ್ತಿದ ಮತ್ತು ಇನ್ನೂ ಬಿತ್ತಬೇಕಾದ ಹೊಲಗಳಲ್ಲಿ ನಿಂತಿರುವ ನೀರನ್ನು ಹೊರ ಹಾಕಬೇಕು. ಮಣ್ಣಿನಲ್ಲಿ ಅತಿಯಾದ ತೇವಾಂಶವಿದ್ದಲ್ಲಿ ಬಿತ್ತುವುದನ್ನು ಮುಂದೂಡಬೇಕು.

ಹೆಸರು ಬಿತ್ತನೆಗೆ ಇನ್ನೂ ಒಂದು ವಾರ ಸಮಯವಿದೆ. ಗೋವಿನ ಜೋಳ, ಉದ್ದು, ಹತ್ತಿ, ಈರುಳ್ಳಿ, ಶೇಂಗಾ, ತೊಗರಿ ಇತ್ಯಾದಿ ಬಿತ್ತನೆ ಮಾಡಲು ಸಾಕಷ್ಟು ಸಮಯವಿದೆ. ಈಗಾಗಲೇ ಬಿತ್ತಿದ ಬೆಳೆಗಳು ಚಿಕ್ಕದಾಗಿ ಇರುವದರಿಂದ, ಭತ್ತವನ್ನು ಹೊರತುಪಡಿಸಿ ಉಳಿದ ಬೆಳೆಗಳ ಜಮೀನಿನಲ್ಲಿ ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಿ.

ಸತತವಾಗಿ ಮಳೆ ಬರುತ್ತಿರುವುದರಿಂದ ಬೆಳೆಗೆ ಅವಶ್ಯವಿರುವ ಪ್ರಮುಖ ಪೋಷಕಾಂಶಗಳಾದ ಸಾರಜನಕ, ರಂಜಕ, ಪೊಟ್ಯಾಷ್ ಮತ್ತು ಗಂಧಕಗಳು ನೀರಿನ ಜೊತೆ ಬಸಿದು ಹೋಗಿ ಪೋಷಕಾಂಶಗಳ ಕೊರತೆ ಉಂಟಾಗಬಹುದಾಗಿದೆ.

ಮೋಡ ಕವಿದ ವಾತಾವರಣ ಇರುವುದರಿಂದ ಬೆಳೆಗಳ ಬೆಳವಣಿಗೆಗೆ ಬೇಕಾದ ಬೆಳಕು ಮತ್ತು ಶಾಖದ ಕೊರತೆ ಉಂಟಾಗಿ ದ್ಯುತಿಸಂಶ್ಲೇಷಣಾ ಕ್ರಿಯೆಯಲ್ಲಿ ಬಾಧೆ ಉಂಟಾಗುತ್ತದೆ. ಇದರಿಂದ ಆರಂಭಿಕ ಹಂತದಲ್ಲಿರುವ ಬೆಳೆಗಳು ಹಳದಿ ಬಣ್ಣಕ್ಕೆ ತಿರುಗಬಹುದು. ಚಿಕ್ಕದಾಗಿ ಇರುವ ಬೆಳೆಗಳಲ್ಲಿ ಪೋಷಕಾಂಶದ ಕೊರತೆ ಲಕ್ಷಣಗಳು ಕಂಡುಬಂದಲ್ಲಿ ತಾತ್ಕಾಲಿಕವಾಗಿ ಪೋಷಕಾಂಶಗಳನ್ನು ನೀಡಿ ಬೆಳೆ ಸಂರಕ್ಷಿಸುವುದು. ಮಳೆ ಬಿಡುವು ಕೊಟ್ಟಾಗ ಕೂಡಲೇ ಎಡೆ ಹೊಡೆದು ಗೊಬ್ಬರ ಕೊಡುವುದು.

ಜಿಲ್ಲೆಯಲ್ಲಿ ಆರಂಭಿಕ ಹಂತದಲ್ಲಿರುವ ಹೆಸರು ಬೆಳೆಗೆ ಪೋಷಕಾಂಶದ ಕೊರತೆಯಾಗಿ ಎಲೆಗಳು ಹಳದಿ ಬಣ್ಣಕ್ಕೆ ತಿರುಗಿದ್ದಲ್ಲಿ ಅತಿ ಕಡಿಮೆ ಪ್ರಮಾಣದಲ್ಲಿ ನ್ಯಾನೊ ಯೂರಿಯಾ ಅಥವಾ ಶೇ. 100 ನೀರಿನಲ್ಲಿ ಕರಗುವ 19:19:19(5.0ಗ್ರಾಂ./ಲೀ.)+ ಲಘು ಪೋಷಕಾಂಶಗಳ ಮಿಶ್ರಣ (1–1.25 ಗ್ರಾಂ./ಲೀ.) ಸಿಂಪರಣೆ ಮಾಡಲು ತಿಳಿಸಿದೆ. ಬಿತ್ತನೆ ಮಾಡುವಾಗ ಶಿಫಾರಸ್ಸು ಮಾಡಲಾದ ಒಟ್ಟು ಸಾರಜನಕದ 50% ಮತ್ತು ಸಂಪೂರ್ಣ ಪ್ರಮಾಣದ ರಂಜಕ ಮತ್ತು ಪೊಟ್ಯಾಷ್ ರಸಗೊಬ್ಬರ ಉಪಯೋಗಿಸಲು ಸಲಹೆ ನೀಡಲಾಗಿದೆ. ಹೊಲಗಳಲ್ಲಿ ಸಾವಯವ ಇಂಗಾಲದ ಪ್ರಮಾಣ ಹೆಚ್ಚಿಸಲು ಸಾವಯವ ಗೊಬ್ಬರಗಳು, ಹಸಿರೆಲೆ ಗೊಬ್ಬರಗಳ ಬಳಕೆ ಹೆಚ್ಚಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿನಿಯರಿಗೆ ನೋಟ್‌ಬುಕ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸರ್ಕಾರಿ ಉರ್ದು ಪ್ರೌಢಶಾಲೆಯ ವಿದ್ಯಾರ್ಥಿನಿಯರಿಗೆ ಖಿದ್ಮತ್ ಏ ಮಿಲ್ಲತ್ ಗ್ರೂಪ್ ವತಿಯಿಂದ ಹಿಜಾಬ್ ಹಾಗೂ ನೋಟ್‌ಬುಕ್ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ತಾಜುದ್ದೀನ್ ಕಿಂಡ್ರಿ, ಪ್ರತಿಭಾವಂತ ಮಕ್ಕಳಿಗೆ ಹಾಗೂ ಬಡ ಮಕ್ಕಳನ್ನು ಗುರುತಿಸಿ ಅಂತಹ ಮಕ್ಕಳಿಗೆ ಪೂರಕ ಕೊಡುಗೆಗಳನ್ನು ಕೊಟ್ಟರೆ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿದಂತಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಅಬ್ದುಲ್ ಹಮೀದ ಮುಜಾವರ, ರಫೀಕ್ ದಲೀಲ, ಹೈದರಲಿ ಖವಾಸ, ರಾಜೇಸಾಬ ಸೈಯದಬಡೆ, ಚಮನಸಾಬ ಹಾದಿಮನಿ, ಮುನ್ನಾ ಢಾಲಾಯತ್, ದಾವೂದ, ಜಮಾಲ್ ಮಾಬುಲಿ ಕೂರ್ತಕೋಟಿ, ಜಾಫರ್ ಭದ್ರಾಪೂರ, ಇಸ್ಮಾಯಿಲ್ ಸುಂಕದ, ರಾಜೇಸಾಬ ಜಮಾಲಸಾಬನವರ, ಫಕ್ರುಸಾಬ ಹಾದಿಮನಿ, ಯೂಸುಫ್ ಶಿದ್ದಿ, ಇಬ್ರಾಹಿಂ ಹಣಗಿ, ಶಿಕ್ಷಕರಾದ ಎಸ್.ಎಂ. ಉಮರ್ಜಿ, ಲಮಾಣಿ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ನಾಳೆ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷರಾದ ಎಂ. ವೆಂಕಟೇಶನ್ ಅವರು ಜೂನ್ 13ರಂದು ಮಧ್ಯಾಹ್ನ 2 ಗಂಟೆಗೆ ಹುಬ್ಬಳ್ಳಿಯಿಂದ ಗದುಗಿಗೆ ಆಗಮಿಸಲಿದ್ದಾರೆ.

ಅಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಸಫಾಯಿ ಕರ್ಮಚಾರಿ ಕಾಲೋನಿಗಳ ವೀಕ್ಷಣೆ ಮಾಡುವರು. ನಂತರ ಮಧ್ಯಾಹ್ನ 4 ಗಂಟೆಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು, ಸಫಾಯಿ ಕರ್ಮಚಾರಿಗಳು, ಎಂ ಆರ್ ಎಫ್ ಕೇಂದ್ರದ ಮುಖ್ಯಸ್ಥರು, ಘನತ್ಯಾಜ್ಯ ನಿರ್ವಹಣೆ, ಒಳಚರಂಡಿ ನಿರ್ವಹಿಸುತ್ತಿರುವ ಏಜೆನ್ಸಿಯ ಮಾಲೀಕರೊಂದಿಗೆ ಮತ್ತು ಕೆಲಸಗಾರರೊಂದಿಗೆ ಸಭೆ ಜರುಗಿಸುವರು. ನಂತರ ವಿಜಯನಗರಕ್ಕೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

# ಉಚಿತ ಚಾಲನಾ ತರಬೇತಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

2023–24ನೇ ಸಾಲಿನ ಎಸ್‌ಸಿಪಿ/ ಟಿಎಸ್‌ಪಿ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅರ್ಹ ಫಲಾನುಭವಿಗಳಿಗೆ ಭಾರಿ ಮತ್ತು ಲಘು ವಾಹನ ಚಾಲನಾ ತರಬೇತಿಯನ್ನು ಉಚಿತವಾಗಿ ವಸತಿ ಸಹಿತ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರ, ಗೋಕುಲ ರಸ್ತೆ, ಹುಬ್ಬಳ್ಳಿಯಲ್ಲಿ ನಡೆಸಲಾಗುತ್ತಿದೆ.

ಅರ್ಹ ಫಲಾನುಭವಿಗಳು ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ತರಬೇತಿ ಕೇಂದ್ರದ ದೂರವಾಣಿ ಸಂಖ್ಯೆ: 0836–2332128/ 9449925367/ 9449971416/ 7996865758ನ್ನು ಸಂಪರ್ಕಿಸಲು ಪ್ರಾದೇಶಿಕ ತರಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲೆಯ 25 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲಿರುವ 7,469 ವಿದ್ಯಾರ್ಥಿಗಳು : ಡಿಸಿ ದಿವ್ಯ ಪ್ರಭು

# ಜೂನ್ 14ರಂದು ಎಸ್‌ಎಸ್‌ಎಲ್‌ಸಿ–2 ಪರೀಕ್ಷೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜೂನ್ 14ರಂದು ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–2 ಜರುಗಲಿದ್ದು, ಜಿಲ್ಲೆಯ 25 ಪರೀಕ್ಷಾ ಕೇಂದ್ರಗಳಲ್ಲಿ ಏಳು ತಾಲೂಕುಗಳ 7469 ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–2 ಬರೆಯಲಿದ್ದಾರೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಅವರು ಮಂಗಳವಾರ ಮಧ್ಯಾಹ್ನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–2 ಕುರಿತು ಪೂರ್ವಭಾವಿ ಸಭೆ ಜರುಗಿಸಿ ಮಾತನಾಡಿದರು.

ಶಾಲಾ ಮುಖ್ಯಸ್ಥರು, ಹಾಗೂ ಪರೀಕ್ಷಾ ಕೇಂದ್ರಗಳ ನೋಡಲ್ ಅಧಿಕಾರಿಗಳು ಪರೀಕ್ಷಾ ಕೇಂದ್ರದಲ್ಲಿ ಸಿಸಿ ಟಿವಿ, ಪೊಲೀಸ್ ಕಾವಲು ಮತ್ತು ಶೌಚಾಲಯ, ಕುಡಿಯುವ ನೀರು ಸೇರಿದಂತೆ ಎಲ್ಲ ಸೌಕರ್ಯಗಳು ವ್ಯವಸ್ಥಿತವಾಗಿ ಇರುವಂತೆ ಮುಂಜಾಗ್ರತೆ ವಹಿಸಬೇಕು ಎಂದು ತಿಳಿಸಿದರು.

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–1ರಲ್ಲಿ ಜಿಲ್ಲೆಯ ಕೆಲವು ಶಾಲೆಗಳು ಶೇ. 100ರಷ್ಟು ಗುರಿ ಸಾಧನೆ ಮಾಡಿ, ಉತ್ಕೃತ್ತಮ ಫಲಿತಾಂಶ ನೀಡಿವೆ. ಇಂತಹ ಶಾಲೆಗಳ ಶಿಕ್ಷಕರನ್ನು, ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಅಗತ್ಯವಿದೆ. ಪ್ರಸಕ್ತ



ವರ್ಷ ಧಾರವಾಡ ಜಿಲ್ಲೆ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ರಾಜ್ಯ–ಕ್ಕೆ ಪ್ರಥಮ ಸ್ಥಾನ ಬರಬೇಕು. ಈ ಕುರಿತು ಶಿಕ್ಷಣ ಇಲಾಖೆಯೊಂದಿಗೆ ಪ್ರತಿ 15 ದಿನಗಳಿಗೊಮ್ಮೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಲಾಗುವುದು. ಜಿಲ್ಲಾಡಳಿತವು ಶಿಕ್ಷಣ ಇಲಾಖೆ ಬೆಂಬಲಕ್ಕಿದ್ದು, ಅಗತ್ಯ ಬೇಡಿಕೆಗಳನ್ನು ಪೂರೈಸಲಾಗುವುದು. ಶಿಕ್ಷಣ ಇಲಾಖೆಯ ಅಧಿಕಾರಿಗಳು, ವಿಷಯ ಪರಿವೀಕ್ಷಕರು, ಶಾಲಾ ಮುಖ್ಯೋಪಾಧ್ಯಯರು, ಶಿಕ್ಷಕರು ಈ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನವನ್ನು ಈಗಿನಿಂದಲೇ ಮಾಡಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–1ರಂತೆ ಪರೀಕ್ಷೆ–2ನ್ನು ಸಹ ಅತ್ಯಂತ ಶಿಸ್ತುಬದ್ಧವಾಗಿ ನಡೆಸಬೇಕು. ಯಾವುದೇ ರೀತಿಯ ಗೊಂದಲ, ನಕಲು ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಸಕಾಲಕ್ಕೆ ಪ್ರಶ್ನೆ ಪತ್ರಿಕೆಗಳು ಪರೀಕ್ಷಾ ಕೇಂದ್ರಕ್ಕೆ ತಲುಪುವಂತೆ ಜಾಗ್ರತೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ನೊಡಲ್ ಅಧಿಕಾರಿ ಡಾ. ರವಿಕುಮಾರ ಆರ್.ಬಾರಾಟಕ್ಕೆ ವಂದಿಸಿದರು.

ಸಭೆಯಲ್ಲಿ ಶಿಕ್ಷಣ ಇಲಾಖೆಯ ವಿವಿಧ ಅಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಿಷಯ ಪರಿವೀಕ್ಷಕರು, ಶಾಲಾ ಮುಖ್ಯೋಪಾಧ್ಯಾಯರು, ಪರೀಕ್ಷಾ ಕೇಂದ್ರದ ನೋಡಲ್ ಅಧಿಕಾರಿಗಳು ಸೇರಿದಂತೆ ಇತರರು ಇದ್ದರು.



### ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮಕ್ಕೆ

# ಸಂಸದ ಬಿ.ವೈ. ರಾಘವೇಂದ್ರ ಭೇಟಿ

■ವಿಜಯಸಾಕ್ಷಿ ಸುದ್ದಿ, ಶಿಕಾರಿಪುರ

ಶಿವಮೊಗ್ಗ ಲೋಕಸಭಾ ಕ್ಷೇತ್ರದಿಂದ ನಾಲ್ಕನೇ ಬಾರಿಗೆ ಲೋಕಸಭಾ ಸದಸ್ಯರಾಗಿ ಆಯ್ಕೆಯಾಗಿರುವ ಬಿ.ವೈ. ರಾಘವೇಂದ್ರರು ಸೋಮವಾರ ಸಂಜೆ ಶಿಕಾರಿಪುರ ತಾಲೂಕ ಕಡೇನಂದಿಹಳ್ಳಿ ತಪೋಕ್ಷೇತ್ರಕ್ಕೆ ಆಗಮಿಸಿ ಶ್ರೀ ಮಳೆಮಲ್ಲೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.

ನಂತರ ಅವರು ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮಕ್ಕೆ ಭೇಟಿ ನೀಡಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಹಾಗೂ ಕ್ಷೇತ್ರದ ದೈವಗಳಿಗೆ ಪೂಜೆ ಸಲ್ಲಿಸಿದರು.



ಈ ಸಂದರ್ಭದಲ್ಲಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಸಂಸದರಿಗೆ ಸ್ಮರಣಿಕೆಯೊಂದಿಗೆ ಆಶೀರ್ವದಿಸಿ ಶುಭ ಹಾರೈಸಿ ಬಿ.ವೈ.ರಾಘವೇಂದ್ರ ಅವರಿಂದ ಜನ ಕಲ್ಯಾಣ ಅಭಿವೃದ್ಧಿ ಕಾರ್ಯಗಳು ಹೆಚ್ಚು ಹೆಚ್ಚಾಗಿ ನಡೆಯಲಿ ಎಂದರು.

ಬಿ.ವೈ. ರಾಘವೇಂದ್ರ ಮಾತನಾಡಿ, ಶ್ರೀಗಳ ಹಾಗೂ ಜನತೆಯ ಆಶೀರ್ವಾದದಿಂದ ನಾಲ್ಕನೇ ಬಾರಿಗೆ ಸಂಸದನಾಗಿ ಆಯ್ಕೆಯಾಗಿದ್ದು, ಇನ್ನೂ ಹೆಚ್ಚಿನ ಜನೋಪಯೋಗಿ ಪ್ರಗತಿ ಕಾರ್ಯಗಳನ್ನು ಮಾಡಲು ಅವಕಾಶ ದೊರೆತಿದೆ ಎಂದರು.

ಮಠದ ಸದ್ಭಕ್ತರು, ಅಭಿಮಾನಿಗಳು, ರಾಜಕೀಯ ಮುಖಂಡರು ಹಾಗೂ ಶ್ರೀ ಗುರು ರೇವಣಸಿದ್ದೇಶ್ವರ ಜನಕಲ್ಯಾಣ ಟ್ರಸ್ಟಿನ ಸದಸ್ಯರು ಉಪಸ್ಥಿತರಿದ್ದರು.

### ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಸತೀಶ ಚಿಟಗುಬ್ಬಿ ಮಾಹಿತಿ

# ಲೋಕಾಯುಕ್ತದಿಂದ ಅಹವಾಲು ಸ್ವೀಕಾರ

■ವಿಜಯಸಾಕ್ಷಿ ಸುದ್ದಿ, ಗದಗ

ಉಪ ಲೋಕಾಯುಕ್ತರಾದ ಗೌರವಾನ್ವಿತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಜೂನ್ 14ರಿಂದ 16ರವರೆಗೆ ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು. ಜೂನ್ 14 ರಂದು ಬೆ 10ರಿಂದ ಮ. 1.30 ರವರೆಗೆ ಮತ್ತು ಮಧ್ಯಾಹ್ನ 2.30 ರಿಂದ ಸಂಜೆ 5 ರವರೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಸರ್ಕಾರಿ ಅಧಿಕಾರಿ/ ನೌಕರರಿಂದ ಕಾನೂನು ಪ್ರಕಾರ ಆಗಬೇಕಾದ ಕೆಲಸದಲ್ಲಿ ವಿಳಂಬವೇನಾದರೂ




ಆಗಿದ್ದಲ್ಲಿ ಅಥವಾ ಅಧಿಕಾರಿ/ನೌಕರರು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವಿನಾಕಾರಣ ತೊಂದರೆ ಕೊಡುವುದು ಅಥವಾ ಇನ್ನಾವುದೇ ತರಹದ ದುರಾಡಳಿತದಲ್ಲಿ ತೊಡಗಿದ್ದರೆ, ಅದರಿಂದ ತೊಂದರೆಗೊಳಗಾದಸಾರ್ವಜನಿಕರು ಅಹವಾಲಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ.

ಜೂನ್ 15ರಂದು ಬೆ. 10 ರಿಂದ ಮಧ್ಯಾಹ್ನ 1.30 ರವರೆಗೆ ಮತ್ತು ಮಧ್ಯಾಹ್ನ 2.30ರಿಂದ 5 ರವರೆಗೆ ಜಿ.ಪಂ. ಸಭಾಂಗಣದಲ್ಲಿ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ತನಿಖೆ/ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳಿಗೆ ಸಂಬಂಧಿಸಿದ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಕಾನೂನು ಪ್ರಕಾರ ವಿಚಾರಣೆ ನಡೆಸುತ್ತಾರೆ. ದೂರುದಾರರು ನಿಗದಿತ ಸಮಯದಲ್ಲಿ ಹಾಜರಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಲೋಕಾಯುಕ್ತ ಕಚೇರಿಯ ಪೊಲೀಸ್ ಅಧೀಕ್ಷಕರಾದ ಸತೀಶ ಚಿಟಗುಬ್ಬಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧರಣಿಗೆ ಶ್ರೀರಾಮ ಸೇನಾ ಬೆಂಬಲ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತೋಂಟದಾರ್ಯ ಮಠದ ಜಾತ್ರೆಯ ನಂತರ ರಥಬೀದಿಯಲ್ಲಿ ನಡೆಯುತ್ತಿರುವ ಅಕ್ರಮ ವ್ಯಾಪಾರ–ವಹಿವಾಟನ್ನು ಸ್ಥಗಿತಗೊಳಿಸುವಂತೆ ಒತ್ತಾಯಿಸಿ ದಲಿತ ಮಿತ್ರ ಮೇಳ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹಕ್ಕೆ ಶ್ರೀರಾಮ ಸೇನಾ ನಗರ ಘಟಕ ಬೆಂಬಲ ಸೂಚಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಸೇನಾದ ಅಧ್ಯಕ್ಷ ಅಶೋಕ ಭಜಂತ್ರಿ, ಈ ಹಿಂದೆ ತೋಂಟದಾರ್ಯ ಮಠದ ಜಾತ್ರೆ ನಂತರ 5 ದಿನ ವ್ಯಾಪಾರ ನಡೆಯುತ್ತಿತ್ತು. ಕೆಲ ವರ್ಷಗಳಿಂದ



10–15 ದಿನ ನಡೆಯುತ್ತಿತ್ತು. ಆದರೆ ಸದ್ಯ ರಥೋತ್ಸವ ಮುಗಿದು ಸುಮಾರು 60 ದಿನ ಕಳೆದರೂ ಅಲ್ಲಿ ವ್ಯಾಪಾರ–ವಹಿವಾಟು ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಇನ್ನೆರಡು ದಿನಗಳಲ್ಲಿ ಸದರಿ ಅಂಗಡಿಗಳನ್ನು ತೆರವುಗೊಳಿಸದಿದ್ದಲ್ಲಿ ಜಾತ್ರಾ ಮಹೋತ್ಸವದಲ್ಲಿ ಇರುವ ಅಂಗಡಿಗಳಿಗೆ ಶ್ರೀರಾಮ ಸೇನಾ ನಗರದ ಘಟಕದ ವತಿಯಿಂದ ಮುತ್ತಿಗೆ ಹಾಕಲಾಗುವುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀರಾಮ ಸೇನಾ ಕಾರ್ಯಕರ್ತರಾದ ಶಿವಯೋಗಿ ಹಿರೇಮಠ, ಸಂಜು ಶೆಟ್ಟಿ, ಶ್ರೀಧರ್ ಮಾಧುಗುಂಡಿ, ಮಂಜು ಮೇಳ್ಳನ್ನವರ್, ಹರೀಶ್ ಹುಣಸಿಮರದ, ಸಂಜು ಚಟ್ಟಿ ಶ್ರೀಧರ ಮಾಧುಗುಂಡಿ ಮಂಜು ಮೇಳ್ಳನ್ನವರ್ ಹರೀಶ ಹುಣಸಿಮರದ, ಹುಲಗಪ್ಪ ವಾಲ್ಮೀಕಿ ಸುನೀಲ ಮುಳ್ಳಾಳ, ಬಸವರಾಜ ಬನ್ನಿಮರದ, ಪ್ರವೀಣ ಜಲಗಾರ, ಸಾಗರ ಹುಯಿಲಗೋಳ, ಕೃಷ್ಣ ಹುಯಿಲಗೋಳ, ಪುಟ್ಟರಾಜ ಕಳಸಣ್ಣವರ, ವಿನಾಯಕ ಹುಯಿಲಗೋಳ, ಸಂತೋಷ ಕುರಿ, ಮಹೇಶ ಹೊಸೂರ, ಭರತ ಲದ್ದಿ, ಮಂಜುನಾಥ ಬಂಡಿವಡ್ಡರ, ಶಿವು ಲದ್ದಿ, ಬಸು ನವಲಿ, ಕುಮಾರ್ ನಡಗೇರಿ, ವೆಂಕಟೇಶ ದೊಡ್ಡಮನಿ, ಮಾಹಾಂತೇಶ ಪಾಟೀಲ ಮುಂತಾದವರು ಉಪಸ್ಥಿತರಿದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿಗೆ ಗದಗ ಜಿಲ್ಲೆಯಲ್ಲಿರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ಮೊರಾರ್ಜಿ ದೇಸಾಯಿ, ಕಿತ್ತೂರ ರಾಣಿ ಚೆನ್ನಮ್ಮ ವಸತಿ ಶಾಲೆಗಳ 7, 8 ಮತ್ತು 9ನೇ ತರಗತಿಗಳಲ್ಲಿ ಖಾಲಿಯಿರುವ ಸ್ಥಾನಗಳ ಪ್ರವೇಶಾತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳ ಪಾಲಕರು ತಮ್ಮ ಹತ್ತಿರದ ಮೊರಾರ್ಜಿ ದೇಸಾಯಿ, ಕಿತ್ತೂರ ರಾಣಿ ಚೆನ್ನಮ್ಮ, ಶ್ರೀಮತಿ ಇಂದಿರಾಗಾಂಧಿ, ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು/ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಕಚೇರಿಗೆ ಭೇಟಿ ನೀಡಿ ಜೂನ್ 15ರೊಳಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಗದಗ ಹಾಗೂ 08372–231828 ನ್ನು ಸಂಪರ್ಕಿಸಬಹುದಾಗಿದೆ.

# ಮೀಡಿಯಾ ಫೆಸ್ಟ್–2024 ಪೋಸ್ಟರ್ ಬಿಡುಗಡೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ 40ನೇ ವರ್ಷಾಚರಣೆ ಸಮಾರೋಪ ಸಮಾರಂಭದ ಅಂಗವಾಗಿ ಜುಲೈ 8, 9ರಂದು ಕವಿವಿ ಮಾನಸೋಲ್ಲಾಸ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿರುವ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ ಹಾಗೂ ರೈನ್‌ಬೋ ರಾಜ್ಯ ಮಟ್ಟದ ಮೀಡಿಯಾ ಫೆಸ್ಟ್ ಕಾರ್ಯಕ್ರಮ ಕುರಿತ ಪೋಸ್ಟರ್‌ನ್ನು ಕುಲಪತಿ ಪ್ರೊ. ಕೆ.ಬಿ. ಗುಡಸಿ ಇತ್ತೀಚೆಗೆ ಬಿಡುಗಡೆ ಮಾಡಿದರು.

ರಾಷ್ಟ್ರಮಟ್ಟದ ಈ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಲು ಸೂಚಿಸಿದರು. ವಿಭಾಗದ ಮುಖ್ಯಸ್ಥ ಪ್ರೊ. ಜೆ.ಎಂ. ಚಂದುನವರ, ಸಹ ಪ್ರಾಧ್ಯಾಪಕ ಡಾ. ಸಂಜಯಕುಮಾರ ಮಾಲಗತ್ತಿ, ಮಹಾಂತ ಪದವಿ ಕಾಲೇಜಿನ ಪತ್ರಿಕೋದ್ಯಮ ಉಪನ್ಯಾಸಕಿ ಜಯಲಕ್ಮೀ ಯಂಡಿಗೇರಿ, ಡಾ. ಪ್ರಭಾಕರ ಕಾಂಬಳೆ, ಪ್ರಕಾಶ ಚಳಗೇರಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 50 ವರ್ಷ ಮೇಲ್ಪಟ್ಟ ಕಷ್ಟ ಪರಿಸ್ಥಿತಿಯಲ್ಲಿರುವ ಮಾಜಿ ಕುಸ್ತಿ ಪಟುಗಳಿಗೆ ಹಾಗೂ ಕ್ರೀಡಾಪಟುಗಳಿಗೆ ಮಾಸಾಶನವನ್ನು ಮಂಜೂರು ಮಾಡುವ ಸಲುವಾಗಿ ಅರ್ಹ ಕ್ರೀಡಾಪಟುಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಆಸಕ್ತರು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇವರ ಕಾರ್ಯಾಲಯದಲ್ಲಿ ಅರ್ಜಿಗಳನ್ನು ಪಡೆದುಕೊಂಡು ಅಗತ್ಯ ಮೂಲ ದಾಖಲಾತಿಗಳೊಂದಿಗೆ ಜೂನ್ 20 ರಂದು ರೊಳಗಾಗಿ ಭರ್ತಿ ಮಾಡಿದ ಅರ್ಜಿಯನ್ನು ಸಲ್ಲಿಸತಕ್ಕದ್ದು.

ಅರ್ಜಿದಾರರು ಕನಿಷ್ಟ 50 ವರ್ಷಗಳ ವಯೋಮಿತಿ ಹೊಂದಿರತಕ್ಕದ್ದು ಅಥವಾ ಕ್ರೀಡೆಯಲ್ಲಿ ತೊಡಗಿದ್ದಾಗ ಅಂಗವಿಕಲತೆ ಹೊಂದಿದ್ದಲ್ಲಿ ವಯೋಮಿತಿಯನ್ನು ಸಡಿಲಗೊಳಿಸಲಾಗುವುದು. ಕರ್ನಾಟಕ ರಾಜ್ಯದಲ್ಲಿ ಕನಿಷ್ಠ 20ವರ್ಷ ಮೇಲ್ಪಟ್ಟು ವಾಸಿಸುತ್ತಿರಬೇಕು. ಅರ್ಜಿದಾರರ ಆದಾಯ ಎಲ್ಲಾ ಮೂಲಗಳಿಂದ (ಯಾವುದೇ ಮಾಸಾಶನ ಪಡೆಯುತ್ತಿದ್ದರೂ ಸಹ ಅದನ್ನು ಸೇರಿಸಿ ) ಒಟ್ಟು ವಾರ್ಷಿಕ ರೂ.20000/– ಗಳನ್ನು ಮೀರಿರಬಾರದು.

ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಇವರ ದೂರವಾಣಿ ಸಂಖ್ಯೆ 08372–238345 ಗೆ ಸಂಪರ್ಕಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka